ಸಂಪುಟ : 10 ಸಂಚಿಕೆ 20 ಪುಟ : 4+2 ಬೆಲೆ: 3.00 ರವಿವಾರ ಫೆಬ್ರವರಿ 16 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 20 Pages : 4+2 Price : 3.00 Sunday February 16 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಫೆಬ್ರವರಿ 16 ರಂದು ಮಧ್ಯಾಹ್ನ 2 ಗಂಟೆಗೆ ಮುದ್ದೇಬಿಹಾಳದಿಂದ ರಸ್ತೆ ಮೂಲಕ ಹೊರಟು ಸಂಜೆ 5 ಗಂಟೆಗೆ ಗದುಗಿಗೆ ಆಗಮಿಸಿ ವಾಸ್ತವ್ಯ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆ. 16ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 29 – ಗುಂಪಿನ ಮನೆ, ಭಾಂಡಗೆಯವರ ಲೈನ್, ಸುಡಗಾಡ ಸಿದ್ಧರ ಕಾಲೋನಿ, ಪೊಲೀಸ್ ಸ್ಟೇಷನ್ ಕೆಳಗಿನ ಭಾಗ. ವಾರ್ಡ್ ನಂ. 1 ಎಸ್. ಎಂ ಕೃಷ್ಣ ನಗರ ಪೂರ್ತಿ ಭಾಗಗಳು. ವಾರ್ಡ್ ನಂ. 28 – ಪಂಚಾಕ್ಷರಿ ನಗರ 5ನೇ ಕ್ರಾಸ್ ಕೆಲವು ಭಾಗಗಳು. ವಾರ್ಡ್ ನಂ. 22 – ಗಂಗಿಮಡಿ, ಅಪಾರ್ಟ್ಮೆಂಟ್. ವಾರ್ಡ್ ನಂ. 35 – 9 ನಂ. ಶಾಲೆ, ವಿಶ್ವೇಶ್ವರಯ್ಯ ನಗರ, ಬಾಲಾಜಿ ನಗರ, ಆದರ್ಶ ನಗರ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 30, 26, 24 – 76 ಪ್ಲಾಟ್, ಅಬ್ಬಿಗೇರಿ ಕಾಂಪೌಂಡ್, ಸಾಲಮನೆ, ಕಮ್ಮಾರ ಸಾಲ, ಉರ್ದು ಶಾಲೆಯ ಹಿಂದೆ, ತಗ್ಗಿನ ಲಾಟ್, ಮಕಾನಗಲ್ಲಿ, ರಂಗನವಾಡ, ದಾಸರ ಓಣಿ, ಜೋಡ ಮಾರುತಿ ಗುಡಿ, ಹಳೆ ಕಚೇರಿ, ಕಿಲ್ಲಾ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6, 5 – ಚನ್ನಪ್ಪಗೌಡರ ಲೈನ್, ಅರವಿಯವರ ಲೈನ್, ಖಾನಾಪುರದವರ ಲೈನ್, ಹಳ್ಳಿಕೇರಿ ಪ್ಲಾಟ್, ಶಿವನಾಗನಗರ, ಗಣೇಶ ನಗರ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು.

ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಾಗಾವಿಯ ಗ್ರಾಮೀಣಾಭಿವೃದ್ಧಿ, ಪಂ.ರಾಜ್ ವಿಶ್ವವಿದ್ಯಾಲಯದಲ್ಲಿ ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲರಿಂದ ವಿಶೇಷ ಉಪನ್ಯಾಸ

# ನಿಮ್ಮ ಧ್ಯೇಯೋದ್ದೇಶಗಳ ಬಗ್ಗೆ ನಿಖರತೆ ಇರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿ ದೆಸೆಯಿಂದಲೇ ನಿಮ್ಮ ಜೀವನದ ಧ್ಯೇಯೋದ್ದೇಶಗಳ ಬಗ್ಗೆ ನಿಖರತೆ ಇರಲಿ. ನಿಮ್ಮ ಉದ್ದೇಶ ಹಾಗೂ ಧ್ಯೇಯೋದ್ದೇಶಗಳ ಸಾಕಾರಕ್ಕೆ ಈಗಿನಿಂದಲೇ ಪರಿಶ್ರಮ ಹಾಕಬೇಕು. ಜೊತೆಗೆ ಪ್ರಾಮಾಣಿಕತೆಯನ್ನು ಜೀವನದುದ್ದಕ್ಕೂ ಅಳವಡಿಸಿಕೊಳ್ಳುವ ಮೂಲಕ ಸಾಧನೆ ನಿಮ್ಮದಾಗಿಸಿಕೊಳ್ಳಿ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಹೇಳಿದರು.

ಇಲ್ಲಿನ ನಾಗಾವಿಯಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಶನಿವಾರ ಜರುಗಿದ 'ಉತ್ತಮ ಆಡಳಿತದಲ್ಲಿ ಲೋಕಾಯುಕ್ತ ಪಾತ್ರ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಉತ್ತಮ ಆಡಳಿತ ನೀಡುವ ಸದುದ್ದೇಶದಿಂದ ಯುವ ಪೀಳಿಗೆ ಸಾರ್ವಜನಿಕ ಸೇವೆಗೆ ಆಗಮಿಸಬೇಕು. ದೈನಂದಿನ ಕರ್ತವ್ಯದಲ್ಲಿ ಪ್ರಾಮಾಣಿಕತೆ ಅಳವಡಿಸಿಕೊಳ್ಳುವ ಮೂಲಕ ಸಾಧನೆ ಮಾಡುವ ಹುಮ್ಮಸ್ಸು ನಿಮ್ಮದಾಗಿಸಿಕೊಳ್ಳಬೇಕು. ನಿಮ್ಮ ವಿಚಾರಧಾರೆಗಳು ಗುಣಮಟ್ಟದಿಂದ ಹಾಗೂ ಉನ್ನತ ವಿಚಾರಗಳಿಂದ ಕೂಡಿರಬೇಕು. ಅವುಗಳ ಸಾಕಾರಕ್ಕೆ ಕಠಿಣ ಪರಿಶ್ರಮ ತೆಗೆದುಕೊಳ್ಳಬೇಕು. ಆಗ ಮಾತ್ರ ಜೀವನದಲ್ಲಿ ಸಾಧನೆ ನಿಮ್ಮದಾಗಲಿದೆ ಎಂದು ಕಿವಿಮಾತು ಹೇಳಿದರು.

ಹಳ್ಳಿಗಳ ಅಭಿವೃದ್ಧಿಯಿಂದ ಮಾತ್ರ ದೇಶದ ಅಭಿವೃದ್ಧಿ. ಹುಟ್ಟಿ ಬೆಳೆದ ಹಳ್ಳಿಗಳಿಗೆ ತೆರಳಿ ಅಭಿವೃದ್ಧಿ ಕಾರ್ಯ ಮಾಡುವ ಗುಣ ಅಧಿಕಾರಿ ವರ್ಗ ಪ್ರಾಮಾಣಿಕವಾಗಿ ಬೆಳೆಸಿಕೊಂಡಾಗ ಅಭಿವೃದ್ಧಿ ಸಾಧ್ಯ. ಅಧಿಕಾರಿಗಳಾದವರು




ತಾವು ಹುಟ್ಟಿ ಬೆಳೆದ ಗ್ರಾಮಗಳಿಗೆ ತೆರಳಿ ಅಲ್ಲಿನ ಪರಿಸ್ಥಿತಿ ಅವಲೋಕಿಸಿ ಹಳ್ಳಿಗಳ ಪ್ರಗತಿಗೆ ಮನಸ್ಸು ಮಾಡಬೇಕು ಎಂದರು.

ಬೆಂಗಳೂರಿನ ಬಿಬಿಎಂಪಿಯ 8 ಪ್ರಾದೇಶಿಕ ಕೇಂದ್ರಗಳಲ್ಲಿಯೂ ಕಸ ವಿಲೇವಾರಿ ಅವ್ಯವಸ್ಥೆ ಕುರಿತು ಸ್ವಯಂ ಪ್ರಕರಣ ದಾಖಲಿಸುವ ಮೂಲಕ ನಿಗಾ ವಹಿಸಲಾಗುತ್ತಿದೆ. ಬಿಬಿಎಂಪಿ ಅಧಿಕಾರಿಗಳಿಂದ ಸ್ವಚ್ಛತೆಗೆ ಆದ್ಯತೆ ನೀಡುವಂತೆ ತಿಳಿಸುವ ಮೂಲಕ ಸಾವಿರಾರು ಟನ್ ಕಸ ವಿಲೇವಾರಿ ಸರಿಯಾಗಿ ಆಗುವಂತೆ ನೋಡಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಆಡಳಿತದಲ್ಲಿ ಅವ್ಯವಹಾರ ಭ್ರಷ್ಟಾಚಾರ ನಡೆದಲ್ಲಿ ಅದನ್ನು ಸರಿಪಡಿಸಲು ಲೋಕಾಯುಕ್ತ ಸಂಸ್ಥೆಯನ್ನು 1984ರಲ್ಲಿ ಆರಂಭಿಸಲಾಗಿದೆ. ಆಡಳಿತದಲ್ಲಿ ದುರಾಡಳಿತ ಕಂಡುಹಿಡಿಯಲು ಸಂಸ್ಥೆ ಸ್ವತಂತ್ರವಾಗಿದೆ. ಇದರ ಕಾರ್ಯ ವ್ಯಾಪ್ತಿ ಅಪರಿಮಿತವಾದದ್ದು ಎಂದು ಹೇಳಿದರು.

ಲೋಕಾಯುಕ್ತ ಸಂಸ್ಥೆಗಳನ್ನು ಬೇರೆ ರಾಜ್ಯಗಳಿಗೆ ಹೋಲಿಸಿದಲ್ಲಿ, ಕರ್ನಾಟಕದಲ್ಲಿ ಲೋಕಾಯುಕ್ತ ಸಂಸ್ಥೆಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಮೂರರಿಂದ ನಾಲ್ಕು ಪಟ್ಟು ಹೆಚ್ಚು ಒದಗಿಸಲಾಗಿದೆ. 2022ರಲ್ಲಿ ಲೋಕಾಯುಕ್ತರಾಗಿ ಅಧಿಕಾರ ಸ್ವೀಕರಿಸಿದ ಮೇಲೆ ನಾನು 26 ಅಂಶಗಳ ಮಾರ್ಗಸೂಚಿಗಳನ್ನು ನೀಡುವ ಮೂಲಕ ಸರ್ಕಾರಿ ಇಲಾಖೆಗಳಿಗೆ ನಿರೀಕ್ಷಿತ-ಅನಿರೀಕ್ಷಿತ ಭೇಟಿ ನೀಡಿ ದುರಾಡಳಿತದ ಬಗ್ಗೆ ವರದಿ ಮಾಡುವಂತೆ ಜಿಲ್ಲಾ ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ತಿಳಿಸಿದರು.

ಲೋಕಾಯುಕ್ತನಾಗಿ ಅಧಿಕಾರ ವಹಿಸಿಕೊಂಡಾಗ ರಾಜ್ಯದಲ್ಲಿ ಒಟ್ಟು 9000 ಪ್ರಕರಣಗಳು ಬಾಕಿ ಇದ್ದವು. ನಂತರದಲ್ಲಿ ಹೊಸ ಪ್ರಕರಣಗಳ ನೋಂದಾವಣೆ ಅಧಿಕವಾಗುತ್ತಾ ಸಾಗಿತು. ಸದ್ಯ 24 ಸಾವಿರ ಪ್ರಕರಣಗಳಿದ್ದು, ಈಗಾಗಲೇ 11000 ಪ್ರಕರಣಗಳನ್ನು ವಿಲೇ ಮಾಡಲಾಗಿದೆ. ಅಲ್ಲದೆ 400ಕ್ಕೂ ಅಧಿಕ ಪ್ರಕರಣಗಳಲ್ಲಿ ಸರ್ಚ್ ವಾರಂಟ್ ಜಾರಿ ಮಾಡುವ ಮೂಲಕ ಕ್ರಮ ವಹಿಸಲಾಗಿದೆ ಎಂದು ನ್ಯಾ. ಬಿ.ಎಸ್. ಪಾಟೀಲ ತಿಳಿಸಿದರು.

ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸುರೇಶ್ ನಾಡಗೌಡರ ಮಾತನಾಡಿ, ಸಾಧನೆಗೆ ಕಠಿಣಶ್ರಮ, ಪ್ರಯತ್ನ ಇರಲಿ. ಲೋಕಾಯುಕ್ತರ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರ ಮಾತುಗಳು ನಿಮ್ಮೆಲ್ಲರಿಗೆ ಪ್ರೇರಣೆಯಾಗಿ, ಉತ್ತಮ ಆಡಳಿತದಲ್ಲಿ ನಾವೆಲ್ಲರೂ ಭಾಗಿಯಾಗೋಣ. ಗಾಂಧೀಜಿಯವರ ಗ್ರಾಮ ಸ್ವರಾಜ್ ಪರಿಕಲ್ಪನೆ ಸಾಕಾರಕ್ಕೆ ಪಾತ್ರರಾಗೋಣ ಎಂದರು.

ವೇದಿಕೆಯಲ್ಲಿ ಲೋಕಾಯುಕ್ತ ಎಸ್.ಪಿ ಹನಮಂತರಾಯ, ವಿವಿ ಹಣಕಾಸು ಅಧಿಕಾರಿ ಪ್ರಶಾಂತ್ ಜೆಸಿ ಉಪಸ್ಥಿತರಿದ್ದರು. ವಿವಿ ಸಹಾಯಕ ನಿರ್ದೇಶಕ ಅಬ್ದುಲ್ ಅಜೀಜ ಮುಲ್ಲಾ ಸ್ವಾಗತಿಸಿದರು. ಉಪನ್ಯಾಸಕ ಮೆಹರ್ವಾಡೆ ವಂದಿಸಿದರು.

> ಸರ್ಕಾರ ಸ್ವಚ್ಛತೆಗೆ ಒತ್ತುಕೊಟ್ಟು ಕಾರ್ಯನಿರ್ವಹಿಸುತ್ತಿದೆ. ಸಾರ್ವಜನಿಕರು ಸ್ವಚ್ಛತೆಯಡೆಗೆ ಜಾಗೃತರಾಗಬೇಕು. ಶೌಚಾಲಯಗಳನ್ನು ದಿನನಿತ್ಯ ಬಳಸುವ ಮನೋಭಾವನೆ ಮೂಡುವಂತೆ ಬದಲಾವಣೆಯಾಗಬೇಕು. ಜಿಲ್ಲಾ ಪಂಚಾಯಿತಿಯಿಂದ ಶೌಚಾಲಯಗಳ ಅವ್ಯವಸ್ಥೆಗಳ ಕುರಿತು ಸ್ವಯಂ ಪ್ರಕರಣ ದಾಖಲಿಸುವ ಮೂಲಕ ಗ್ರಾಮೀಣಾಭಿವೃದ್ಧಿಗೆ ಇರುವ ಎಲ್ಲ ಕ್ರಮಗಳನ್ನು ಲೋಕಾಯುಕ್ತ ಇಲಾಖೆ ಕೈಗೊಳ್ಳುತ್ತಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ತಿಳಿಸಿದರು.

### ಗದಗ ಹೊಸ ಬಸ್ ನಿಲ್ದಾಣಕ್ಕೆ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಸದಸ್ಯರ ದಿಢೀರ್ ಭೇಟಿ

# ಪ್ರಯಾಣಿಕರಿಗೆ ಮೂಲಸೌಲಭ್ಯ ಒದಗಿಸುವಂತೆ ಸೂಚನೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಹೊಸ ಬಸ್ ನಿಲ್ದಾಣಕ್ಕೆ ದಿಢೀರ್ ಭೇಟಿ ನೀಡಿದ ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ ಸೇರಿದಂತೆ ಪ್ರಾಧಿಕಾರದ ಸದಸ್ಯರು ಬಸ್ ನಿಲ್ದಾಣದಲ್ಲಿ ಶುಚಿತ್ವ ಕಾಪಾಡುವುದು ಸೇರಿ, ಪ್ರಯಾಣಿಕರಿಗೆ ಮೂಲಸೌಲಭ್ಯ ಒದಗಿಸುವಂತೆ ಅಧಿಕಾರಿಗಳಿಗೆ ಸಲಹೆ-ಸೂಚನೆ ನೀಡಿದರು. ಅಲ್ಲದೇ, ಪಂಚ ಗ್ಯಾರಂಟಿಗಳು ತಲುಪುತ್ತಿರುವ ಬಗ್ಗೆ ಪ್ರಯಾಣಿಕರಿಂದ ಮಾಹಿತಿ ಪಡೆದರು.

ಬಸ್ ನಿಲ್ದಾಣದ ತುಂಬೆಲ್ಲ ಜೇಡು ಕಟ್ಟಿರುವುದು, ಕಸ ಎಲ್ಲೆಂದರಲ್ಲಿ ಬಿಸಾಡಿರುವುದು, ಶುದ್ಧ ಕುಡಿಯುವ ನೀರು ವ್ಯವಸ್ಥೆ ಕಲ್ಪಿಸದಿರುವುದು, ಪ್ರಯಾಣಿಕರಿಗೆ ಕುಳಿತುಕೊಳ್ಳಲು ಸರಿಯಾದ ವ್ಯವಸ್ಥೆ ಇಲ್ಲದಿರುವುದು ಹಾಗೂ ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡಿಕೊಳ್ಳದಿರುವ ಕುರಿತು ಪರಿಶೀಲನೆ ನಡೆಸಿ 15 ದಿನದೊಳಗಾಗಿ ಸರಿಪಡಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

## ಪ್ರಯಾಣಿಕರ ಕುಂದುಕೊರತೆ ಆಲಿಕೆ

ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ ಸೇರಿದಂತೆ ಪ್ರಾಧಿಕಾರದ ಸದಸ್ಯರು ಗದಗ ಹೊಸ ಬಸ್ ನಿಲ್ದಾಣದಲ್ಲಿ ಸಂಚರಿಸಿ ಪ್ರಯಾಣಿಕರ ಕುಂದುಕೊರತೆಗಳನ್ನು ಆಲಿಸಿದರು. ಜೊತೆಗೆ ಪಂಚಗ್ಯಾರಂಟಿಗಳು ಪ್ರತಿಯೊಬ್ಬರಿಗೂ ತುಲುಪುತ್ತಿರುವ ಬಗ್ಗೆ ಮಾಹಿತಿ ಪಡೆದುಕೊಂಡರು. ಈ ವೇಳೆ ಮಹಿಳೆಯರು ಕಳೆದ ಎರಡು ತಿಂಗಳಿನಿಂದ ಗೃಹಲಕ್ಷ್ಮೀ ಯೋಜನೆ ಹಣ ಬಂದಿಲ್ಲ ಎಂದಾಗ ಮುಂದಿನ ತಿಂಗಳೊಳಗಾಗಿ ಬಾಕಿ ಕಂತಿನ ಹಣವನ್ನು ಪಾವತಿಸಲು ಸರಕಾರ ಕ್ರಮ ಕೈಗೊಂಡಿದೆ ಎಂದು ತಿಳಿಸಿದರು.

ಇದೇ ವೇಳೆ ನರಗುಂದ ಭಾಗದ ಮಹಿಳೆಯೊಬ್ಬರು ಗೃಹಜ್ಯೋತಿ ಯೋಜನೆಯಡಿ ವಿದ್ಯುತ್ ಉಚಿತವಾಗಿಲ್ಲ ಎಂದು ತಿಳಿಸಿದರು. ಆಗ ಬಿ.ಬಿ. ಅಸೂಟಿ ಅವರು ತಕ್ಷಣ ಅವರ ಮಾಹಿತಿ ಪಡೆದುಕೊಂಡು ಅರ್ಜಿ ಹಾಕಿ ಉಚಿತ ಪಡೆಯಲು ಸಂಬಂಧಪಟ್ಟ ಸಿಬ್ಬಂದಿಗೆ ಸೂಚನೆ ನೀಡಿದರು.

ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಗದಗ ಹೊಸ ಬಸ್ ನಿಲ್ದಾಣ ರಾಜ್ಯಕ್ಕೇ ಮಾದರಿಯಾಗಿದ್ದು, ಸ್ವಚ್ಛತೆ ಮಾಯವಾಗಿದೆ.

▸▸3ನೇ ಪುಟಕ್ಕೆ

### ತಾಲೂಕಾ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಿಗೆ ಶಾಸಕ ಜಿ.ಎಸ್. ಪಾಟೀಲರಿಂದ ಆಹ್ವಾನ

# ಹಿರೇವಡೆಯರ ಗುರುಗಳ ಜ್ಞಾನ ಅಪಾರ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿಡಗುಂದಿಕೊಪ್ಪದಲ್ಲಿ ಫೆ.20ರಂದು ನಡೆಯಲಿರುವ ಗಜೇಂದ್ರಗಡ ತಾಲೂಕಿನ ಪ್ರಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಕೋಡಿಕೊಪ್ಪದ ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ ಅವರನ್ನು ರೋಣ ಶಾಸಕ ಜಿ.ಎಸ್. ಪಾಟೀಲರು ಅಧಿಕೃತ ಆಹ್ವಾನವನ್ನು ನೀಡುವ ಮೂಲಕ ಸಾಹಿತ್ಯ ಸಮ್ಮೇಳನಕ್ಕೆ ಆಮಂತ್ರಿಸಿದರು.

ಕೋಡಿಕೊಪ್ಪದಲ್ಲಿನ ಹಿರೇವಡೆಯರ ಅವರ ನಿವಾಸಕ್ಕೆ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಾಲೂಕಾಧ್ಯಕ್ಷ ಅಮರೇಶ ಗಾಣಿಗೇರ ಮತ್ತು ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪೂರ ಮತ್ತು ಕನ್ನಡಾಭಿಮಾನಿಗಳೊಂದಿಗೆ ಆಗಮಿಸಿ ಆಮಂತ್ರಿಸಿದರು.

ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಹಿರೇವಡೆಯರ ಗುರುಗಳ ಜ್ಞಾನ ಅಪಾರವಾದುದು.



ವಯೋವೃದ್ಧರೂ, ಜ್ಞಾನವೃದ್ಧರೂ ಆಗಿರುವ ಅವರಿಗೆ ಸಂದಿರುವ ಈ ಗೌರವ ನಿಜಕ್ಕೂ ಸ್ತುತ್ಯಾರ್ಹವಾದುದು. ಈ ಮೂಲಕ ಸರ್ವಾಧ್ಯಕ್ಷ ಸ್ಥಾನಕ್ಕೆ ಒಬ್ಬ ಅರ್ಹ ವ್ಯಕ್ತಿಯನ್ನು ಆರಿಸಿದ ಸಮಾಧಾನ ಆಯ್ಕೆ ಸಮಿತಿಗಿದೆ ಎಂದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ನಿರೂಪಿಸಿ, ಸ್ವಾಗತಿಸಿದರು. ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಸ್ಥಾಯಿ ಸಮಿತಿ ಅಧ್ಯಕ್ಷ ಮುತ್ತಪ್ಪ ನೂಲ್ಕಿ, ಪ.ಪಂ ಸದಸ್ಯರು, ನಿಂಗನಗೌಡ ಲಕ್ಕನಗೌಡ್ರ, ಮುಖ್ಯಾಧಿಕಾರಿ ಮಹೇಶ ನಿಡಶೇಷಿ, ಶಹರ ಕಾಂಗ್ರೆಸ್ ಘಟಕದ ಅಧ್ಯಕ್ಷ ಶಿವನಗೌಡ ಪಾಟೀಲ, ವಿರೂಪಾಕ್ಷಗೌಡ ಹಿರೆಗೌಡ್ರ, ಕುಬೇರಪ್ಪ ನಾಶಿಪುಡಿ, ಎಸ್.ಕೆ. ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಸುನೀಲ ಬಸವರಡ್ಡೇರ, ಡಾ. ಕಲ್ಲಯ್ಯ ಹಿರೇಮಠ, ಶಿಕ್ಷಕ ಬಿ.ಟಿ. ತಾಳಿ, ಶಿಕ್ಷಕ ಎಂ.ಕೆ. ಬೇವಿನಕಟ್ಟಿ, ಡಾ. ಎಲ್.ಎಸ್. ಗೌರಿ, ಬಿ.ಎಸ್. ಉದ್ದಣ್ಣವರ, ವೀರಪ್ಪ ಜಿರ್ಲ, ಬಸನಗೌಡ ಹಿರೇವಡೆಯರ, ವಿರುಪಾಕ್ಷಗೌಡ ಹಿರೇವಡೆಯರ, ಎಂ.ಸಿ. ಹಿರೇವಡೆಯರ, ಮಹಾಂತಯ್ಯ ಗುರುವಡೆಯರ, ಪ್ರಮೋದ ಕಳಕಣ್ಣವರ, ಬಿ.ಕೆ. ಜಾಲೀಹಾಳ, ಅಲ್ಲಾಭಕ್ಷಿ ನದಾಫ್ ಮುಂತಾದವರಿದ್ದರು. ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಸಭೆಯನ್ನುದ್ದೇಶಿಸಿ ಮಾತನಾಡಿದರು. ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ವಂದಿಸಿದರು.

> ಈ ಸಂದರ್ಭದಲ್ಲಿ ಮಾತನಾಡಿದ ಸರ್ವಾಧ್ಯಕ್ಷ ಹಿರೇವಡೆಯರ, ನನ್ನ ಮೇಲಿನ ಅಭಿಮಾನ ಮತ್ತು ವಿಶ್ವಾಸದಿಂದ ನನ್ನನ್ನು ತಾಲೂಕಾ ಸಮ್ಮೇಳನದ ಅಧ್ಯಕ್ಷನನ್ನಾಗಿ ಆಯ್ಕೆ ಮಾಡಿದ್ದೀರಿ. ಈ ಸ್ಥಾನ ನನಗೆ ಸಿಕ್ಕಿರುವುದು ನಾನು ಗುರು ಶ್ರೀ ಅನ್ನದಾನೇಶ್ವರರ ಮೇಲಿಟ್ಟಿರುವ ಭಕ್ತಿ, ನನ್ನ ಕರ್ತವ್ಯ ನಿಷ್ಠೆಯಿಂದ. ಈ ಭಕ್ತಿ ಮತ್ತು ಕರ್ತವ್ಯ ನಿಷ್ಠೆಯನ್ನು ಗುರುತಿಸಿ ನೀವು ನನ್ನನ್ನು ಗಜೇಂದ್ರಗಡ ತಾಲೂಕಾ ಪ್ರಥಮ ಸಮ್ಮೇಳನಕ್ಕೆ ಅಧ್ಯಕ್ಷನಾಗಿ ಆಯ್ಕೆ ಮಾಡಿರುವದನ್ನು ತುಂಬು ಸಂತೋಷದಿಂದ ಸ್ವೀಕರಿಸಿದ್ದೇನೆ ಎಂದರು.

ಭಾವಪೂರ್ಣ ಶ್ರದ್ಧಾಂಜಲಿ



**ದಿವಂಗತ ಶ್ರೀಮತಿ ಸುಶೀಲಾ ಕೋಂ ಇಷ್ಟಲಿಂಗಪ್ಪ ನಾಯ್ಕರ.**

ಗದಗ ಜಿಲ್ಲೆ ಗದಗ ತಾಲ್ಲೂಕಿನ ಕುರ್ತಕೋಟಿ ಗ್ರಾಮದಲ್ಲಿ ದಿನಾಂಕ **08/02/2025** ರಂದು ಶನಿವಾರ ರಾತ್ರಿ **11:30** ಕ್ಕೆ ಅವರು ನಿಧನರಾದ ಸುದ್ದಿ ತಿಳಿಸಲು ವಿಷಾದಿಸುತ್ತೇವೆ. ಕಾರಣ ಮೃತರ ಶಿವಗಣಾರಾಧನೆಯನ್ನು ದಿನಾಂಕ **16/02/2025** ರಂದು ರವಿವಾರ ಬೆಳಗ್ಗೆ **10:00** ಘಂಟೆಗೆ ಗದಗ ಜಿಲ್ಲೆ ಗದಗ ತಾಲ್ಲೂಕಿನ ಕುರ್ತಕೋಟಿ ಸ್ವ ಗ್ರಾಮದಲ್ಲಿ ನೆರವೇರಿಸಲಾಗುತ್ತದೆ. ಕಾರಣ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೊರಬೇಕಾಗಿ ವಿನಂತಿ.🙏

ದು:ಖತಪ್ತರು.
ಇಷ್ಟಲಿಂಗಪ್ಪ ನಾಯ್ಕರ. (ಪತಿ) ಮಕ್ಕಳು. ಸೊಸೆಯಂದಿರು.
ಮೊಮ್ಮಕ್ಕಳು. ಅಪಾರ ಬಂಧು ಬಳಗದವರು.

## ಸಂಪಾದಕೀಯ

# ಬಿಜೆಪಿಯಲ್ಲೂ ಶುರುವಾಗಲಿ ದಲಿತ ಮುಖ್ಯಮಂತ್ರಿ ಚರ್ಚೆ

ಬಿಜೆಪಿಯಲ್ಲಿ ಶುರುವಾಗಿರುವ ಬಣ ಬಡಿದಾಟ ಈಗ ಆಡಳಿತಾರೂಢ ಕಾಂಗ್ರೆಸ್ ಪಕ್ಷಕ್ಕೂ ವಿಸ್ತರಣೆಯಾಗಿದೆ. ಸಿದ್ದರಾಮಯ್ಯ ನಂತರ ಮುಖ್ಯಮಂತ್ರಿ ಯಾರಾಗಬೇಕು, ಹೊಸ ನಾಯಕತ್ವ ಸಿಗುವವರೆಗೂ ಸಿದ್ದರಾಮಯ್ಯ ಕಾಂಗ್ರೆಸ್ಸಿನ ಉಸ್ತುವಾರಿ ವಹಿಸಿಕೊಳ್ಳಲಿ ಎನ್ನುವ ಬಗ್ಗೆ ಚರ್ಚೆಗಳು ಶುರುವಾಗಿದೆ.

ಇನ್ನೊಂದೆಡೆ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ರಾಜ್ಯ ಕಾಂಗ್ರೆಸ್ ವಲಯದಲ್ಲಿ ಭಾರಿ ಚರ್ಚೆಗೆ ಕಾರಣವಾಗಿದೆ. ಈ ಬಾರಿ ಅಹಿಂದ ವರ್ಗಕ್ಕೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಕಾಂಗ್ರೆಸ್ಸಿನ ಅನೇಕ ಹಿಂದುಳಿದ ಸಮುದಾಯದ ಶಾಸಕರು ಸಚಿವರು ಅಭಿಪ್ರಾಯಪಟ್ಟಿದ್ದಾರೆ.

ಈ ಮಧ್ಯೆ ದಲಿತ ಮುಖ್ಯಮಂತ್ರಿಯ ಚರ್ಚೆ ಮತ್ತೊಮ್ಮೆ ಮುನ್ನಡೆಗೆ ಬಂದಿದೆ. ಆದರೆ ಈ ಬಾರಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಕಾಂಗ್ರೆಸಿನ ದಲಿತ ಸಿಎಂ ಚರ್ಚೆಯಲ್ಲಿ ಭಾಗವಹಿಸಿದ್ದಾರೆ. ಕಾಂಗ್ರೆಸ್ಸಿನಲ್ಲಿ ದಲಿತ ಮುಖ್ಯಮಂತ್ರಿ ಆದರೆ ಸಂತೋಷ ಎನ್ನುವ ಹೇಳಿಕೆ ನೀಡಿದ್ದಾರೆ.

ಸದ್ಯಕ್ಕೆ ಕಾಂಗ್ರೆಸ್ ನಲ್ಲಿ ಅಹಿಂದ ವರ್ಗದ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿದ್ದಾರೆ. ದಲಿತ ಮುಖ್ಯಮಂತ್ರಿ ಆಯಾ ಪಕ್ಷದ ಆಂತರಿಕ ಚರ್ಚೆ. ಕನಿಷ್ಠಪಕ್ಷ ಕಾಂಗ್ರೆಸ್ ನಲ್ಲಿ ದಲಿತರು ಸಿಎಂ ಆಗಲಿ ಎನ್ನುವ ಚರ್ಚೆಗಳಾದರೂ ನಡೆಯುತ್ತಿದೆ. ಬಿಜೆಪಿಯಲ್ಲಿ ಅಂಥದ್ದೊಂದು ಭಿನ್ನ ಸ್ವರವು ಕೇಳಿ ಬಂದಿಲ್ಲ.

ಕಾಂಗ್ರೆಸ್ ನಲ್ಲಿ ಅಷ್ಟೇ ಏಕೆ ಬಿಜೆಪಿ ಬಹುಮತಕ್ಕೆ ಬಂದರೆ ದಲಿತ ಸಿಎಂ ಮಾಡುವ ಮಾತಾಡಲಿ. ದಲಿತ, ಅಲ್ಪಸಂಖ್ಯಾತ ವಿರೋಧಿ ಹಣೆಪಟ್ಟಿ ಹೊಂದಿರುವ ಬಿಜೆಪಿ, ಭವಿಷ್ಯದಲ್ಲಿ ಬಿಜೆಪಿಯಲ್ಲಿಯೂ ದಲಿತರು ಮುಖ್ಯಮಂತ್ರಿ ಆಗಲಿ ಎನ್ನುವ ಆಶಯ ವ್ಯಕ್ತಪಡಿಸಲಿ. ಅಂದಾಗ ಪ್ರಹ್ಲಾದ ಜೋಶಿ ಅವರ ಮಾತಿಗೆ ಅರ್ಥ ಬರುತ್ತದೆ.

# ಶರಣ ಸಂಗಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಫೆ. 16ರ ಬೆಳಿಗ್ಗೆ 7.30ಕ್ಕೆ ನಡೆಯಲಿರುವ ಬಸವದಳದ 1633ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ ಹಾಗೂ ಕರ್ನಾಟಕದ ಗಾಂಧಿ ಹರ್ಡೇಕರ ಮಂಜಪ್ಪನವರ 139ನೇ ಜಯಂತಿ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣ ವಿ.ಕೆ. ಕರೇಗೌಡ್ರ, ವಹಿಸುವರು. ಶರಣ ಎಸ್.ಎ. ಮುಗದ ಇವರು ಸಹಜಶಿವಯೋಗ ಮಾಡುವರು. ಶರಣ ಎಂ.ಬಿ. ಲಿಂಗಧಾಳ ಉಪನ್ಯಾಸ ಮಾಡುವರು. ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

**ಕೊಪ್ಪಳ ವಿಶ್ವವಿದ್ಯಾಲಯ ಮುಚ್ಚುವ ತೀರ್ಮಾನವನ್ನು ಹಿಂಪಡೆಯುವಂತೆ ಪ್ರತಿಭಟಿಸಿ ಮನವಿ**

# ಕೊಪ್ಪಳ ವಿಶ್ವವಿದ್ಯಾಲಯ ಉಳಿಸಿ



■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ವಿಶ್ವವಿದ್ಯಾಲಯ ಮುಚ್ಚುವ ತೀರ್ಮಾನವನ್ನು ಹಿಂಪಡೆಯುವಂತೆ ಒತ್ತಾಯಿಸಿ ಪ್ರಗತಿಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಮುಖಂಡರು, ವಿದ್ಯಾರ್ಥಿಗಳು ಜಿಲ್ಲಾ ಆಡಳಿತ ಭವನದ ಮುಂಭಾಗದಲ್ಲಿ ಪ್ರತಿಭಟಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಜಿಲ್ಲಾಧಿಕಾರಿಗಳ ಅನುಪಸ್ಥಿತಿಯಲ್ಲಿ ಚುನಾವಣೆ ವಿಭಾಗದ ತಹಸೀಲ್ದಾರ್ ರವಿ ವಸ್ತ್ರದ್ ಅವರ ಮೂಲಕ ಮನವಿ ಸಲ್ಲಿಸಿದರು.

ಹಿಂದಿನ ಬಿಜೆಪಿ ಸರಕಾರ ಸ್ಥಾಪಿಸಿದ ವಿಶ್ವವಿದ್ಯಾಲಯಗಳನ್ನು ಮುಂದುವರೆಸಿಕೊಂಡು ಹೋಗದೆ ಇರುವುದು ವಿಷಾದನೀಯ. ಯು.ಜಿ.ಸಿ ಪ್ರಕಾರ ಎರಡು ಜಿಲ್ಲೆಗೆ ಒಂದರಂತ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿ ಹೆಚ್ಚಿನ ಉನ್ನತ ಶಿಕ್ಷಣವನ್ನು ಮೇಲಸ್ಥರಕ್ಕೆ ಒಯ್ಯಬೇಕೆಂಬ ಆಶಯಕ್ಕೆ ಈ ನಡೆ ವಿರೋಧವಾಗಿದೆ. ಕಲ್ಯಾಣ ಕರ್ನಾಟಕ/ಶೈಕ್ಷಣಿಕವಾಗಿ ಹಿಂದುಳಿದ ಪ್ರದೇಶವಾಗಿದೆ. ಆ ಕಾರಣಕ್ಕಾಗಿ ನಂಜುಂಡಪ್ಪ ವರದಿ ಜಾರಿಯಾಯಿತು. ಸಂವಿಧಾನದ 371 (ಜೆ)ನೇ ಕಲಂ ಕೂಡ ಜಾರಿಯಾಯಿತು. ಕಲ್ಯಾಣ ಕರ್ನಾಟಕದ ಬೀದರ ವಿಶ್ವವಿದ್ಯಾಲಯ ಉಳಿಸಿಕೊಂಡಂತೆ, ಶೈಕ್ಷಣಿಕವಾಗಿ ತೀರ ಹಿಂದುಳಿದ ಪ್ರದೇಶವಾದ ಮತ್ತು ಕೊಪ್ಪಳದಲ್ಲಿ ಅಪರೂಪಕ್ಕೆ ಸ್ಥಾಪನೆಯಾದ ವಿಶ್ವವಿದ್ಯಾಲಯವನ್ನು ಉಳಿಸಿಕೊಳ್ಳಬೇಕು.

ನಮ್ಮ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿ, ಕೊಪ್ಪಳ ವಿಶ್ವವಿದ್ಯಾಲಯಗಳನ್ನು ಮುಚ್ಚುವ ತೀರ್ಮಾನವನ್ನು ಹಿಂಪಡೆಯಬೇಕೆಂದು ಹಿರಿಯ ಬಂಡಾಯ ಸಾಹಿತಿ ಅಲ್ಲಮ ಪ್ರಭು ಬೆಟ್ಟದೂರು, ಅಖಿಲ ಭಾರತ ಕಾರ್ಮಿಕ ಸಂಘಟನೆಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷ ಬಸವರಾಜ ಶೀಲವಂತರ್, ವಿದ್ಯಾರ್ಥಿಗಳಾದ ಪವನ್ ಕುಮಾರ್, ನಾಗರಾಜ ರಾಥೋಡ್, ಜುನುಸಾಬ್ ವಡ್ಡಟ್ಟಿ, ರೈತ ಸಂಘಟನೆಯ ರಾಜ್ಯ ನಾಯಕ ಡಿ.ಹೆಚ್. ಪೂಜಾರ್, ಕೆ.ಬಿ.ಗೋನಾಳ, ಶರಣು ಗಡ್ಡಿ, ನಿವೃತ್ತ ಪ್ರಾಚಾರ್ಯ ಬಿ.ಜಿ. ಕರಿಗಾರ, ಸಾಹಿತಿಗಳಾದ ಎ.ಎಮ್. ಮದರಿ, ಈಶ್ವರ ಹತ್ತಿ, ಕಾಶಪ್ಪ ಚಲವಾದಿ, ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್, ಮಖಬೂಲ್ ರಾಯಚೂರು ಮುಂತಾದವರು ಒತ್ತಾಯಿಸಿದರು.

ಬೀದರ ವಿಶ್ವವಿದ್ಯಾಲಯ ವಿದ್ಯಾರ್ಥಿಗಳ ಶುಲ್ಕದಿಂದ ಉಳಿದಂತೆ, ಕೊಪ್ಪಳದ ವಿಶ್ವವಿದ್ಯಾಲಯವೂ ವಿದ್ಯಾರ್ಥಿಗಳ ಶುಲ್ಕದ ಬೆಂಬಲದಿಂದ ಉಳಿದಿತ್ತು. ಕನ್ನಡದ ಶಾಲೆಗಳನ್ನು ಮುಚ್ಚುತ್ತಾ ಬಂದ ಸರಕಾರ ವಿಶ್ವವಿದ್ಯಾಲಯಗಳನ್ನು ಮುಚ್ಚುತ್ತಿರುವುದು ನಾಚಿಕೆಗೇಡಿನ ಸಂಗತಿ. ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಕ್ಕೆ ವಿಶೇಷ ನೆರವು ನೀಡಬೇಕಾದದ್ದು ಸರಕಾರದ ಆದ್ಯ ಕರ್ತವ್ಯ. ಸರಕಾರವು ಶಿಕ್ಷಣವನ್ನು ಆರ್ಥಿಕ ಮತ್ತು ಲಾಭದ ದೃಷ್ಟಿಯಿಂದ ನೋಡಬಾರದು ಮತ್ತು ಹಣಕಾಸಿನ ತೊಂದರೆ ಮುಂದೆ ಮಾಡಬಾರದು ಎಂದು ಮನವಿಯಲ್ಲಿ ತಿಳಿಸಿದರು.

**'ಬಸವ ಶ್ರೀ', 'ಬಸವ ರತ್ನ' ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ 'ಶರಣರ ಸದನ' ಪುಸ್ತಕ ಬಿಡುಗಡೆ**

# ಮಾಧ್ಯಮಗಳು ಒಳ್ಳೆಯ ಸುದ್ದಿಗೆ ಆದ್ಯತೆ ನೀಡಲಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಾರತ ಹುಣ್ಣಿಮೆ ದಿನ ನಿವೃತ್ತ ಆರ್ಮಿ ಕ್ಯಾಪ್ಟನ್ ಬಿ.ಬಿ. ಚಕ್ರಸಾಲಿ ಅವರ ಪುಸ್ತಕ ಬಿಡುಗಡೆ ಮಾಡಿದ್ದು ನನ್ನ ಸೌಭಾಗ್ಯ. ಛಂದಸ್ಸು ಮತ್ತು ಷಟ್ಪದಿಗಳಲ್ಲಿ ಚಿಕ್ಕದಾದರೂ ಚೊಕ್ಕದಾಗಿ 'ಶರಣರ ಸದನ' ಎಂಬ ಕೃತಿ ಬರೆದಿದ್ದಾರೆ ಎಂದು ಮಹಾಂತ ಪ್ರಥಮದರ್ಜೆ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ಸಹ ಪ್ರಾಧ್ಯಾಪಕರಾದ ಡಾ. ಪುಷ್ಪಾ ಬಸನಗೌಡರ ಹೇಳಿದರು.

ಆಲೂರ ವೆಂಕಟರಾವ ಸಭಾಭವನದಲ್ಲಿ ನಮ್ಮ ಬಸವ ಸೇನೆ ಬೆಂಗಳೂರು ಹಾಗೂ ಧಾರವಾಡ ನ್ಯೂಸ್ ಆಶ್ರಯದಲ್ಲಿ ನಿವೃತ್ತ ಕ್ಯಾಪ್ಟನ್ ಬಿ.ಬಿ. ಚಕ್ರಸಾಲಿ ರಚನೆಯ 'ಶರಣರ ಸದನ' ಪುಸ್ತಕ ಬಿಡುಗಡೆ ಸಮಾರಂಭ, 'ಬಸವ ಶ್ರೀ' ಹಾಗೂ 'ಬಸವ ರತ್ನ' ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪುಸ್ತಕ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ಹಿರಿಯ ಪತ್ರಿಕಾ ಛಾಯಾಗ್ರಾಹಕ ರಾಮಚಂದ್ರ ಕುಲಕರ್ಣಿ ನಿಧನಕ್ಕೆ ಸಂತಾಪ ಸೂಚಿಸಿ, ಮೌನಾಚರಣೆ ಮಾಡಲಾಯಿತು.

ಮನಗುಂಡಿ ಶ್ರೀ ಗುರುಬಸವ ಮಹಾಮನೆಯ ಬಸವಾನಂದ ಶ್ರೀಗಳು ಸಾನ್ನಿಧ್ಯ ವಹಿಸಿ




ಆಶೀರ್ವಚನ ನೀಡಿ, ಇಂದಿನ ಮಾಧ್ಯಮಗಳು ಕೆಟ್ಟದ್ದನ್ನು ಹೆಚ್ಚು ಹೆಚ್ಚಾಗಿ ತೋರಿಸುತ್ತಾರೆ. ಆದರೆ ಅದೇ ಒಳ್ಳೆಯದನ್ನು ಮಾಡಿರುವವರ ಬಗ್ಗೆ ತೋರಿಸದಿರುವುದು ನೋವಿನ ಸಂಗತಿ. ಮಾಧ್ಯಮಗಳು ಒಳ್ಳೆಯ ಸುದ್ದಿಗೆ ಹೆಚ್ಚಿನ ಆದ್ಯತೆ ನೀಡಲಿ ಎಂದು ಸಲಹೆ ನೀಡಿದರು.

ನಮ್ಮ ಬಸವ ಸೇನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಹಾಗೂ ಅಖಿಲ ಕರ್ನಾಟಕ ಪತ್ರಕರ್ತರ ಅಕಾಡೆಮಿ ರಾಜ್ಯಾಧ್ಯಕ್ಷ ಲೋಕೇಶ ಮೂರ್ತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಉತ್ತಮ ಹಾಗೂ ಪ್ರಶಸ್ತಿಗೆ ಯೋಗ್ಯವಾಗಿರುವಂತಹ ವ್ಯಕ್ತಿಗಳನ್ನು ಪ್ರಶಸ್ತಿಗಳಿಗೆ ಆಯ್ಕೆ ಮಾಡಿರುವುದು ಸಂತಸ ತಂದಿದೆ ಎಂದರು.

ಸಾವಿತ್ರಿಬಾಯಿ ಫುಲೆ ರಾಷ್ಟ್ರೀಯ ಶಿಕ್ಷಕಿಯರ ಫೆಡರೇಷನ್‌ನ ಅಧ್ಯಕ್ಷರು ಹಾಗೂ ಕರ್ನಾಟಕ ಸಾವಿತ್ರಿಬಾಯಿ ಫುಲೆ ಶಿಕ್ಷಕಿಯರ ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಡಾ. ಲತಾ ಎಸ್. ಮುಳ್ಳೂರ ಮಾತನಾಡಿ,. ನಿವೃತ್ತಿಯ ನಂತರ ಸಮಯ ಹಾಳು ಮಾಡದೇ ಈ ಪುಸ್ತಕ ರಚಿಸಿರುವದು ಹೆಮ್ಮೆಯ ವಿಷಯ ಎಂದರು.

ಮನಸೂರಿನ ರೇವಣಸಿದ್ದೇಶ್ವರ ಮಹಾಮಠದ ಡಾ. ಬಸವರಾಜ ದೇವರು ಸಾಮಾಜಿಕ, ಶಿಕ್ಷಣ, ಸಾಹಿತ್ಯ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರದಲ್ಲಿ ಸಾಧನೆಗೈದ ಗಣ್ಯರಿಗೆ ಬಸವ ಶ್ರೀ ಹಾಗೂ ಬಸವ ರತ್ನ ಪ್ರಶಸ್ತಿ ಪ್ರದಾನ ಮಾಡಿದರು.

ರಾಜ್ಯ ಪ್ರಶಸ್ತಿ ಪುರಸ್ಕೃತರು ಹಾಗೂ ನಿವೃತ್ತ ಮುಖ್ಯೋಪಾಧ್ಯಾಯರಾದ ಶಂಕರ ಗಂಗಣ್ಣವರ ಅಧ್ಯಕ್ಷತೆ ವಹಿಸಿದ್ದರು. ಸಾಹಿತಿ, ಪತ್ರಕರ್ತೆ ಹಾಗೂ ವಕೀಲರಾದ ರಮ್ಯಾ ವರ್ಷಿಣಿ ಬಸವಶ್ರೀ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದರು. ಶರಣರ ಸದನ ಪುಸ್ತಕ ಬರೆದಿರುವ ನಿವೃತ್ತ ಆರ್ಮಿ ಕ್ಯಾಪ್ಟನ್ ಬಿ.ಬಿ. ಚಕ್ರಸಾಲಿ ತಮ್ಮ ಅನುಭವಗಳನ್ನು ಹಂಚಿಕೊಂಡರು. ಧಾರವಾಡ ನ್ಯೂಸ್ ಸಂಪಾದಕ ಬಸವರಾಜ ಆನೆಗುಂದಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಬೆಳಗಾವಿ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರಾದ ವಿ. ಕೃಷ್ಣಮೂರ್ತಿ, ಶ್ರೀ ಶಿವಾನಂದಸ್ವಾಮಿ ಬೇತೂರಮಠ ಟ್ರಸ್ಟ್‌ನ ಅಧ್ಯಕ್ಷ ಮಹಾಂತೇಶ ಬೇತೂರಮಠ, ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಮಾನವ ಹಕ್ಕುಗಳ ರಕ್ಷಣಾ ಸಮಿತಿ ಧಾರವಾಡ ಜಿಲ್ಲಾಧ್ಯಕ್ಷ ಅಶೋಕ ಶೆಟ್ಟರ್, ಅಖಿಲ ಕರ್ನಾಟಕ ಭೋವಿ ವಡ್ಡರ ಯುವ ವೇದಿಕೆ (ಕ್ರಾಂತಿ) ರಾಜ್ಯ ಕಾರ್ಯಾಧ್ಯಕ್ಷ ಮಂಜುನಾಥ ತಿಮ್ಮಣ್ಣ ಹಿರೇಮನಿ, ಸಾಮಾಜಿಕ ಜಾಲತಾಣ ಅಧ್ಯಕ್ಷರಾದ ಬಸವರಾಜ ಬೂದಿಹಾಳ ಭಾಗವಹಿಸಿದ್ದರು.

ಜೈಹಿಂದ ಪ್ರೌಢಶಾಲೆ ಮುಖ್ಯೋಪಾಧ್ಯಾಯರಾದ ರವಿ ಪೂಜಾರ, ಬೆಳಗಲಿ ಪಿಡಿಓ ವಿಶ್ವನಾಥ ಟಂಗ್ರಿಕರ, ಬಿಜೆಪಿ ಯುವ ಮುಖಂಡ ಬಸವರಾಜ ರುದ್ರಾಪೂರ, ಡಿಎಸ್‌ಎಸ್ ರಾಜ್ಯ ಸಂಚಾಲಕರಾದ ಲಕ್ಷ್ಮಣ ಬ.ದೊಡ್ಡಮನಿ, ಡಿಎಸ್‌ಎಸ್ ಮುಖಂಡರಾದ ನಾರಾಯಣ ಮಾದರ, ಹನಮಂತ ಮೊರಬ, ಅಶೋಕ ಭಂಡಾರಿ, ಪತ್ರಕರ್ತರಾದ ಲಿಂಗರಾಜ ಪಾಟೀಲ, ರಮಾನಂದ ಕಮ್ಮಾರ, ಚಂದ್ರಶೇಖರ ಹಿರೇಮಠ, ಈರಣ್ಣ ಗುರಿಕಾರ, ಕೋಣಪ್ಪ ಸಾಲೋಟಗಿ (ಎಸ್. ಕಲ್ಯಾಣಕುಮಾರ), ನಮ್ಮ ಬಸವ ಸೇನೆ ವ್ಯವಸ್ಥಾಪಕ ರಾಜಮಲ್ಲು, ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಮಾನವ ಹಕ್ಕುಗಳ ರಕ್ಷಣಾ ಸಮಿತಿ ಬೆಳಗಾವಿ ಜಿಲ್ಲಾಧ್ಯಕ್ಷರಾದ ಬಸವರಾಜ ರುದ್ರಾಪೂರ, ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಮಾನವ ಹಕ್ಕುಗಳ ರಕ್ಷಣಾ ಸಮಿತಿ ರಾಜ್ಯ ಸಮಿತಿ ಸದಸ್ಯರಾದ ಉಳವೇಶ ದುಂಡಾನಟ್ಟಿ ಅವರನ್ನು ಸನ್ಮಾನಿಸಲಾಯಿತು.

'ಬಸವ ಶ್ರೀ' ಪ್ರಶಸ್ತಿಯನ್ನು ಡಾ. ವೀಣಾ ಬಿರಾದಾರ, ಯಮನಪ್ಪ ಜಾಲಗಾರ, ಉಮರಖಿನ್ ಮೈ. ಚಪ್ಪರಬಂದ, ಡಾ. ಕುಮದ್ವತಿ ಶಂಕರಗೌಡ ಭರಮಗೌಡ್ರ, ಡಾ. ಲತಾ ಎಸ್. ಮುಳ್ಳೂರ, ಬಿ.ಆರ್. ಚಂದ್ರಶೇಖರ, ರಮ್ಯಾ ವರ್ಷಿಣಿ, ವಿಲಿಯಮ್ಸ್, ಸುಲೋಚನಾ ಕೆ.ಮುದಲಿಯಾರ, ವಿಜಯಲಕ್ಷ್ಮೀ ಕಮ್ಮಾರ ಅವರಿಗೆ ಪ್ರದಾನ ಮಾಡಲಾಯಿತು.

'ಬಸವ ರತ್ನ' ಪ್ರಶಸ್ತಿಯನ್ನು ಮಹಾಂತೇಶ ಬ.ಬಡ್ಲಿ, ಬಸವರಾಜ ಎಸ್.ಕುದರಿ, ಸುನಂದಾ ರಾಮ್ ಕರಿಗಾರ, ಗಂಗಾಂಬಿಕೆ ತಿಪ್ಪಣ್ಣ ಕುರುಬರ, ಗಂಗವ್ವ ಮಲ್ಲಿಕಾರ್ಜುನ ಮುಗಳಿ, ನೇತ್ರಾವತಿ ಮಡ್ಲಿ, ಡಾ. ಭೀಮಾಶಂಕರ ಎಂ.ಆರ್., ಸುವರ್ಣಾ ಬಿ.ಸುರಕೋಡ, ಸತೀಶ ಎಸ್.ಸರ್ಜಾಪೂರ, ರತ್ನಾ ಗೋಧಿ, ರತ್ನಕುಮಾರ, ಅಶ್ವತಪ್ಪ, ಶ್ರೀನಿವಾಸ ಅವರೊಳ್ಳಿ, ಮಂಜುನಾಥ ತಿಮ್ಮಣ್ಣ ಹಿರೇಮನಿ, ಸಿದ್ಧಾರ್ಥ ಪಾತ್ರೋಟಿ, ಬಸವರಾಜ ಪಾತ್ರೋಟಿ ಅವರಿಗೆ ಪ್ರದಾನ ಮಾಡಲಾಯಿತು.

# ಸಂತ ಸೇವಾಲಾಲರ ಜಯಂತಿ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಅಡವಿಸೋಮಾಪೂರ ಸಣ್ಣ ತಾಂಡೆ ಶಾಲೆಯಲ್ಲಿ ಸಂತ ಸೇವಾಲಾಲ 286ನೇ ಜಯಂತಿ ಆಚರಿಸಲಾಯಿತು.

ಮುಖ್ಯ ಶಿಕ್ಷಕ ಮಲ್ಲೇಶ ಡಿ ಎಚ್ ಸಂತ ಸೇವಾಲಾಲ ಅವರ ಜೀವನ ಸಂದೇಶ ಕುರಿತು ಮಾತನಾಡಿದರು.

ಶಿಕ್ಷಕರಾದ ಎಸ್ ಜಿ ಅಮ್ಮಿನಭಾವಿ, ಎಸ್ ಟಿ ಹಳಕಟ್ಟಿ, ಪಿ ಬಿ ಕಿಲಬನವರ, ಶಾಲಾ



ಮೇಲುಸ್ತುವಾರಿ ಸಮಿತಿ ಅಧ್ಯಕ್ಷೆ ಶ್ರೀಮತಿ ಪಾರವ್ವ ಉಮೇಶ ಲಮಾಣಿ, ಮಾರುತಿ ಪವಾರ್, ಮಂಜಪ್ಪ ಲಕ್ಷ್ಮಣ ರಜಪೂತ, ಸಿದ್ದಪ್ಪ ಜಡಿ, ಗಂಗವ್ವ ಲಮಾಣಿ, ಸಾವಿತ್ರಿ ರಾಠೋಡ, ದೇವಕ್ಕ ಲಮಾಣಿ ಶಾಲಾ ಮಕ್ಕಳು ಇದ್ದರು.



ಲಕ್ಷ್ಮೇಶ್ವರದ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣುಮಕ್ಕಳ ಶಾಲೆಯಲ್ಲಿ ಸೇವಾಲಾಲ ಮಹಾರಾಜರ ಜಯಂತಿ ಆಚರಿಸಲಾಯಿತು. ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ, ಎಚ್.ಡಿ. ನಿಂಗರೆಡ್ಡಿ, ಆರ್.ಎಂ. ಶಿರಹಟ್ಟಿ, ಆರ್.ಕೆ. ಉಪನಾಳ, ಅಕ್ಷತಾ ಕಾಟೆಗರ್, ಲಕ್ಷ್ಮೀ ಹತ್ತಿಕಟ್ಟಿ ಹಾಗೂ ವಿದ್ಯಾರ್ಥಿಗಳಿದ್ದರು.

# ವಕಾರಸಾಲು ಲೀಸ್ ಪ್ರಕರಣ: ನಗರಸಭೆ ಮಾಜಿ ಅಧ್ಯಕ್ಷೆ ಸೇರಿ ಮೂವರು ಸದಸ್ಯತ್ವ ಸ್ಥಾನದಿಂದ ಅನರ್ಹ

■ ವಿಜಯಸಾಕ್ಷಿ ಸುದ್ದಿ, ಗದಗ

ಸಾವಿರಾರು ಕೋಟಿ ರೂ. ಮೌಲ್ಯದ 54 ವಕಾರಸಾಲುಗಳನ್ನು ಕಾನೂನು ಬಾಹಿರವಾಗಿ ದೀರ್ಘಾವಧಿಗೆ ಒಪ್ಪಂದ ಮಾಡಿಕೊಂಡು ಸುಳ್ಳು ಠರಾವು ಸೃಷ್ಟಿಸಿದ ಆರೋಪದಡಿ ಅನರ್ಹ ಭೀತಿ ಎದುರಿಸುತ್ತಿದ್ದ ಮೂವರು ಃಎಕ ನಗರಸಭೆ ಸದಸ್ಯರನ್ನು ಸದಸ್ಯತ್ವ ಸ್ಥಾನದಿಂದ ಅನರ್ಹಗೊಳಿಸುವಂತೆ ಬೆಳಗಾವಿ ಪ್ರಾದೇಶಿಕ ಆಯುಕ್ತರು ಆದೇಶ ನೀಡಿದ್ದಾರೆ.

ಮಾಜಿ ಅಧ್ಯಕ್ಷೆ ಹಾಗೂ ಸದಸ್ಯೆ ಉಷಾ ದಾಸರ, ಸದಸ್ಯರಾದ ಅನಿಲ ಅಬ್ಬಿಗೇರಿ ಹಾಗೂ ಗೊಳಪ್ಪ ಮುಷಿಗೇರಿ ಅಮಾನತ್ತಿಗೆ ಒಳಪಟ್ಟ ಸದಸ್ಯರಾಗಿದ್ದು, ವಕಾರು ಸಾಲು ಲೀಸ್ ಪ್ರಕರಣ ಸಂಬಂಧಿಸಿದಂತೆ ಠರಾವು ನಕಲಿ ಕುರಿತು ಪ್ರಕರಣ



ಇದಾಗಿದೆ.

ಪ್ರಾದೇಶಿಕ ಆಯುಕ್ತರಿಂದ ಆದೇಶ ಪ್ರತಿ ಜಿಲ್ಲಾಧಿಕಾರಿ ಕಚೇರಿಗೆ ರವಾನೆ ಆಗಿದ್ದು, ಸೋಮವಾರ ಅಮಾನತು ಪ್ರಕ್ರಿಯೆ ಜರುಗಬಹುದು ಎಂದು ಜಿಲ್ಲಾಡಳಿತ ಮೂಲಗಳಿಂದ ತಿಳಿದು ಬಂದಿದೆ.

**ಏನಿದು ಪ್ರಕರಣ..?**

2023 ರ ಅಕ್ಟೋಬರ್ 25 ರಿಂದ 2024 ರ ಜುಲೈ 22 ರ ನಡುವಿನ ಅವಧಿಯಲ್ಲಿ ಗದಗ-ಬೆಟಗೇರಿ ನಗರಸಭೆ ಮಾಲೀಕತ್ವದ ಸಾವಿರಾರು ಕೋಟಿ ರೂ. ಮೌಲ್ಯದ 54 ವಕಾರಸಾಲುಗಳನ್ನು ಕಾನೂನು ಬಾಹಿರವಾಗಿ ದೀರ್ಘಾವಧಿಗೆ ಒಪ್ಪಂದ ಮಾಡಿಕೊಂಡು ಸುಳ್ಳು ಠರಾವು ಸೃಷ್ಟಿಸಿದ ಆರೋಪದಡಿ ನಗರಸಭೆಯ ಅಂದಿನ ಪ್ರಭಾರಿ ಪೌರಾಯುಕ್ತ ಪ್ರಶಾಂತ ವರಗಪ್ಪನವರ ಅವರು ಬೆಟಗೇರಿ ಬಡಾವಣೆ ಪೊಲೀಸ್ ಠಾಣೆಯಲ್ಲಿ 2024 ರ ಆ. 15 ರಂದು ದೂರು ದಾಖಲಿಸಿದ್ದರು.

2024 ರ ಫೆಬ್ರವರಿ 9ರಂದು ನಡೆದ ನಗರಸಭೆ ಸಾಮಾನ್ಯ ಸಭೆಯಲ್ಲಿ ಠರಾವು ಪಾಸಾಗಿದೆ ಎಂದು ನಕಲಿ ಠರಾವು ಸೃಷ್ಟಿಸಿ 2024 ರ ಜುಲೈ 22ರಂದು ವಕಾರಸಾಲಿನ ಎಲ್ಲ ಅನುಭೋಗದಾರರಿಗೆ ಕಬ್ಜಾ ನೀಡಲಾಗಿದೆ ಎಂದು ನಕಲಿ ಪತ್ರವನ್ನು ಸೃಷ್ಟಿಸಿ ಎರಡೂ ದಾಖಲೆಗಳಿಗೆ ಫಿರ್ಯಾದಿದಾರರ ನಕಲಿ ಸಹಿಯನ್ನು ಮಾಡಿ ಗದಗ-ಬೆಟಗೇರಿ ನಗರಸಭೆಗೆ ಹಾಗೂ ಸರಕಾರಕ್ಕೆ ಮೋಸ ಮಾಡಿದ ಆರೋಪದಡಿ ದೂರು ದಾಖಲಾಗಿತ್ತು. ಇತ್ತೀಚೆಗೆ ಬೆಟಗೇರಿ ಬಡಾವಣೆ ಠಾಣೆಯ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಕೆ ಮಾಡಿದ್ದರು.

# ಯೋಧರು ನಮ್ಮ ದೇಶದ ದೊಡ್ಡ ಶಕ್ತಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪುಲ್ವಾಮಾ ದಾಳಿಯಲ್ಲಿ ವೀರ ಮರಣವನ್ನಪ್ಪಿದ ಭಾರತೀಯ ಯೋಧರಿಗೆ ಶುಕ್ರವಾರ ಸಂಜೆ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ನಿಂದ ಮೋಂಬತ್ತಿ ಮೆರವಣಿಗೆ ಮಾಡುವ ಮೂಲಕ ನಮನ ಸಲ್ಲಿಸಲಾಯಿತು.

ಪಟ್ಟಣದ ಶಿಗ್ಲಿ ನಾಕಾದಿಂದ ಭಾನು ಮಾರ್ಕೆಟ್‌ನ ಹನಮಂತದೇವರ ದೇವಸ್ಥಾನವರೆಗೆ ಪರಿಷತ್ ಕಾರ್ಯಕರ್ತರು, ಯುವಕರು ಮೇಣದಬತ್ತಿ ಹಿಡಿದು ಘೋಷಣೆ ಕೂಗುತ್ತಾ ಸಾಗಿದರು.

ಈ ವೇಳೆ ಮಾತನಾಡಿದ ಪರಿಷತ್‌ನ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಅರುಣ ಬಾರ್ಕಿ,



ಯೋಧರು ನಮ್ಮ ದೇಶದ ದೊಡ್ಡ ಶಕ್ತಿ ಮತ್ತು ಆಸ್ತಿಯಾಗಿದ್ದಾರೆ. ಅವರ ಮೇಲೆ ಅಟ್ಟಹಾಸ ಮೆರೆದ ಉಗ್ರರ ಕೃತ್ಯವನ್ನು ಎಂದಿಗೂ ಕ್ಷಮಿಸಲು ಸಾಧ್ಯವಿಲ್ಲ. ನಮ್ಮ ಭಾರತದ ಸೈನ್ಯವನ್ನು ಕೆಣಕಿದ ಯಾವುದೇ ದೇಶಕ್ಕೂ ಸಹ ತಕ್ಕ ಉತ್ತರ ನೀಡಲು ನಮ್ಮ ಸೈನ್ಯ ಸಿದ್ಧವಾಗಿದೆ. ಅಗಲಿರುವ ವೀರಯೋಧರು ಮತ್ತೊಮ್ಮೆ ಈ ನಾಡಿನಲ್ಲಿ ಹುಟ್ಟಿ ಬರಲಿ. ಅವರ ಆತ್ಮಕ್ಕೆ ದೇವರು ಚಿರಶಾಂತಿಯನ್ನು ನೀಡಲಿ ಎಂಬುದು ಎಲ್ಲರ ಪ್ರಾರ್ಥನೆಯಾಗಿದೆ. ಯುವಕರು ಪಾಶ್ಚಾತ್ಯ ಸಂಸ್ಕೃತಿಗೆ ಮರುಳಾಗದೇ ತಂದೆ-ತಾಯಿ, ಗುರು-ಹಿರಿಯರು, ಯೋಧರು, ರೈತರು, ಸೈನಿಕರಿಗೆ ಗೌರವ ಸಲ್ಲಿಸುವ ಕಾರ್ಯವಾಗಬೇಕಿದೆ ಎಂದರು.

ಮೆರವಣಿಗೆಯಲ್ಲಿ ಶ್ರೀ ರಾಮಸೇನೆ ತಾಲೂಕು ಅಧ್ಯಕ್ಷ ಈರಣ್ಣ ಪೂಜಾರ, ಎಬಿವಿಪಿ ನಗರ ಕಾರ್ಯದರ್ಶಿ ಅಭಿಷೇಕ ಉಮುಚಗಿ, ತಾಲೂಕು ಸಂಚಾಲಕ ಪ್ರಕಾಶ ಕುಂಬಾರ, ವಿನಯ್ ಉಮಚಗಿ, ಮಹಾಂತೇಶ ಮಣಕವಾಡಿ, ಕಿರಣ ಗುಡಿಗೇರಿ, ಯಶ್ವಂತ್ ಶಿರಹಟ್ಟಿ, ಮನೋಜ್ ತಂಡಿಗೇರ, ವಿನಯ ಕುಂಬಾರ, ಶಿವರಾಜ ದುರ್ಗದ, ಅಮಿತ್ ಗುಡಿಗೇರಿ, ಬಸವರಾಜ ಆಲೂರ, ಹರೀಶ ಕಟ್ಟಿಮನಿ, ರವಿ ಪುರಾಣಿಕಮಠ ಸೇರಿ ಕಾರ್ಯಕರ್ತರಿದ್ದರು.

**ಡಂಬಳದ ಹಜರತ್ ಜಮಾಲಶಾವಲಿ ಶರಣರ ಉರೂಸ್ ಆಚರಣೆ ಇಂದು**

# ಭಕ್ತರ ಪಾಲಿನ ಆಶಾಕಿರಣ ಜಮಾಲಶಾವಲಿ ಶರಣರು

■ ವಿಜಯಸಾಕ್ಷಿ ಸುದ್ದಿ, ಡಂಬಳ

ನೂರಾರು ವರ್ಷಗಳಿಂದ ಗ್ರಾಮದ ತೋಂಟದಾರ್ಯ ಜಾತ್ರಾ ಮಹೋತ್ಸವ ಮುಗಿದ ಆನಂತರ ಸೂಫಿ ಸಂತರಾದ ಹಜರತ್ ಜಮಾಲಶಾವಲಿ ಶರಣರ ಉರೂಸ್ ನಡೆಯುತ್ತಿದ್ದು, ಫೆ.16ರಂದು ಉರೂಸ್ ಅದ್ದೂರಿಯಾಗಿ ಜಾತ್ಯತೀತವಾಗಿ ಜರುಗಲಿದೆ.

ಫೆ. 16ರಂದು ಬೆಳಗ್ಗೆಯಿಂದ ಸಂಜೆಯವರೆಗೆ ರೈತಾಪಿ ವರ್ಗದವರಿಂದ ಎತ್ತುಗಳ ಮೆರವಣಿಗೆ, ರಾತ್ರಿ ಅನ್ನ ಸಂತರ್ಪಣೆ, ಆನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಹಜರತ್ ಜಮಾಲಶಾವಲಿ ಶರಣರ ಜಾತ್ಯತೀತ ಧಾರ್ಮಿಕ ಸಂತರು. ಮಿಗಿಲಾಗಿ, ಅಖಂಡ ಮಾನವ ಸಮುದಾಯದ ಹಿತಾಸಕ್ತಿ ಬಗ್ಗೆ, ಕ್ರಿಯಾಶೀಲ ಬದುಕಿನ ಬಗ್ಗೆ, ಧರ್ಮದ ಗಡಿಯನ್ನು ದಾಟಿ ಚಿಂತಿಸಿ, ಲೋಕ ಸಂಚಾರ ಮಾಡಿ ತಾವು ಕಂಡ ಜ್ಞಾನವನ್ನು ಸರಳವಾಗಿ ಪ್ರಸಾರ ಮಾಡಿದ ವಿಶ್ವಧರ್ಮಿಗಳಾಗಿದ್ದರು. ಮಾನವ ಕಲ್ಯಾಣಕ್ಕಾಗಿ ಅವರ ಪವಾಡಗಳು ಇಂದಿಗೂ ಮನೆಮಾತಾಗಿವೆ.

ಗ್ರಾಮದಲ್ಲಿ ಎಲ್ಲ ಸಮೂಹದ ರೈತಾಪಿ ವರ್ಗ ಉರೂಸ್‌ನಂದು ತಮ್ಮ ಎತ್ತುಗಳನ್ನು ಸಿಂಗರಿಸಿಕೊಂಡು ಹಲವು ವಾದ್ಯಗಳ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ದರ್ಗಾದ ಸುತ್ತ ಐದು ಬಾರಿ ಸುತ್ತನ್ನು ಹಾಕಿಸಿ ಸಕ್ಕರೆಯ ಪೂಜೆಯನ್ನು ಮಾಡಿಸುವ ಮೂಲಕ ಭಕ್ತಿ ಮೆರೆಯುವುದು ಇಲ್ಲಿನ ವಿಶೇಷ. ಈಗಲೂ ಎತ್ತುಗಳ ಆರೋಗ್ಯದಲ್ಲಿ ಏರುಪೇರಾದರೆ ರೈತರು ಜಮಾಲಶಾವಲಿ ಶರಣರ ದರ್ಗಾಕ್ಕೆ ಬಂದು ಭಕ್ತಿ ಸಮರ್ಪಿಸುತ್ತಾರೆ. ಎತ್ತುಗಳ ಬಳ ಆರೋಗ್ಯದಲ್ಲಿ ಚೇತರಿಕೆಯಾಗುತ್ತದೆ ಎನ್ನುವ ನಂಬಿಕೆ ರೈತರಿಗೆ ಇದೆ. ಇದಲ್ಲದೇ ಭಕ್ತರ ಆಶಯಗಳು, ಇಷ್ಟಾರ್ಥಗಳು ಈಡೇರುತ್ತವೆ ಎಂದು ಅನಾದಿಕಾಲದಿಂದಲೂ ಇರುವ ನಂಬಿಕೆ.

ತೋಂಟದಾರ್ಯ ಜಾತ್ರೆ ಮುಗಿದ ಆನಂತರ ಮಠದ ಶ್ರೀಗಳಿಂದ ಗಂಧ ಮತ್ತು ಉರೂಸ್ ಆಚರಿಸಲಾಗುತ್ತಿತ್ತು. ಅಲ್ಲದೆ ಉರೂಸ್‌ನ ದಿನ ಜರುಗುವ ಅನ್ನ ಸಂತರ್ಪಣೆಯಂದು ಮೊದಲು ಮಠದಲ್ಲಿರುವ ವೇದ ಮೂರ್ತಿಗಳಿಂದ ಪೂಜೆ ಸಲ್ಲಿಸಿದ ನಂತರ ಅನ್ನಸಂತರ್ಪಣೆ ಜರಗುತ್ತದೆ. ನೂರಾರು ವರ್ಷಗಳಿಂದ ಜಾತ್ರೆ ಮುಗಿದ ಬಳಿಕ ಉರೂಸ್ ಜರುಗುತ್ತಿದ್ದು, ಜನಮಾನಸದ ಭಕ್ತರ ಜಾತ್ರೆಯಾಗಿ ರೂಪುಗೊಂಡಿದೆ ಎನ್ನುತ್ತಾರೆ ಗೌಸುಸಾಬ ಆಲೂರ, ಶಫೀಕ ಮೂಲಿಮನಿ, ಮೋಹದ್ದಿನ ಚಾಂದಖಾನವರ, ಹಾಮದ ಸರಕಾವಾಸ, ಬುಡ್ನೆಸಾಬ ಅತ್ತಾರ, ಇಂತಿಯಾಜ ದಫೇದಾರ, ಮಹಬೂಬ ಬನ್ನಿಕೊಪ್ಪ, ಮುರ್ತುಜಾ ಮನಿಯಾರ ಹಾಗೂ ಸಮಿತಿಯ ಸರ್ವ ಸದಸ್ಯರು.

ಧರ್ಮ ಸಮನ್ವಯ ದೃಷ್ಟಿಯಿಂದ ಸಾಮರಸ್ಯ ಮೂಡಿಸಿ, ವಿವಿಧತೆಯಲ್ಲಿ ಏಕತೆಯನ್ನು ಸಾರಿ, ಜಾತ್ಯತೀತ ತತ್ವವನ್ನು ಮೂಡಿಸಿ, ಭಕ್ತರ ಪಾಲಿನ ಆಶಾಕಿರಣವಾಗಿ ಭಕ್ತರ ಜೀವನೋತ್ಸಾಹ ತುಂಬುತ್ತಿರುವ ಜಮಾಲಶಾವಲಿ ಶರಣರು ಹಾಕಿಕೊಟ್ಟ ಸದ್ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ.

**– ಖಾಜಾಹುಸೇನ ಮಹಮ್ಮದರಫೀಕ ಹೊಸಪೇಟೆ.**
ಸಮಾಜ ಸೇವಕರು.

ಉತ್ತರ ಕರ್ನಾಟಕದಲ್ಲಿಯೇ ಬಸವತತ್ವದ ಜಾಗೃತಪೀಠ ಮತ್ತು ರೊಟ್ಟಿ ಜಾತ್ರೆಗೆ ಪ್ರಸಿದ್ಧಿಯಾದ ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ನಂತರ ಪ್ರತಿ ವರ್ಷ ಹಜರತ ಜಮಾಲಶಾವಲಿ ಶರಣರ ಗಂಧ ಮತ್ತು ಉರುಸು ಭಾವೈಕ್ಯತೆಯ ಸಂಕೇತವಾಗಿ ಎಲ್ಲರು ಕೂಡಿಕೊಂಡು ಮಾಡುವ ಶರಣ ಉತ್ಸವವಾಗಿದೆ.

**– ಜಾಕೀರ ಖಾದರಸಾಬ ಮೂಲಿಮನಿ.** ಸಮಾಜ ಸೇವಕರು.

## ಸಿಬಿಎಸ್‌ಇ 10, 12 ನೇ ತರಗತಿ ಬೋರ್ಡ್ ಪರೀಕ್ಷೆ: ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಿಬಿಎಸ್‌ಇ ಇವರ ವತಿಯಿಂದ 10 ಮತ್ತು 12ನೇ ತರಗತಿ ಬೋರ್ಡ್ ಪರೀಕ್ಷೆಗಳು ಫೆಬ್ರವರಿ 15 ರಿಂದ ಎಪ್ರಿಲ್ 4 ರವರೆಗೆ ಬೆ 10 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ನಡೆಯುತ್ತಿದ್ದು, ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 5 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ. ಪರೀಕ್ಷಾ ಕೇಂದ್ರಗಳ 200 ಮೀಟರ್ ಪರಿಮಿತಿಯೊಳಗೆ ಫೆಬ್ರವರಿ 15 ರಿಂದ ಎಪ್ರಿಲ್ 4 ರವರೆಗೆ ಬೆ 8.30 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶೇಷ ಚೇತನರ ಅರಿವು-ಉತ್ತಮ ಪರಿಸರ ನಿರ್ಮಾಣ ಕಾರ್ಯಕ್ರಮದಲ್ಲಿ ಕವಿತಾ ಬೇಲೇರಿ

# ಮಕ್ಕಳು ರಕ್ಷಿತ ವಾತಾವರಣದಲ್ಲಿ ಬೆಳೆಯಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ಸಂತೋಷವಾಗಿ ರಕ್ಷಿತ ವಾತಾವರಣದಲ್ಲಿ, ಗೌರವಯುತವಾಗಿ ಯಾವುದೇ ತಾರತಮ್ಯವಿಲ್ಲದೇ ಬಾಲ್ಯವನ್ನು ಅನುಭವಿಸಬೇಕು, ಬೆಳೆಯಬೇಕು. ವಿಶೇಷ ಚೇತನ ಮಕ್ಕಳ ಬೆಳವಣಿಗೆಗೆ ನಮ್ಮೆಲ್ಲರ ಪ್ರೀತಿಯ ಸಹಕಾರ ಅವಶ್ಯವೆಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಶನಿವಾರ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಿಂದ ಗಂಗಿಮಡಿ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಜರುಗಿದ ವಿಶೇಷ ಚೇತನರ ಅರಿವು ಹಾಗೂ ಉತ್ತಮ ಪರಿಸರ ನಿರ್ಮಾಣ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿಶೇಷ ಚೇತನರ ವ್ಯಕ್ತಿತ್ವ, ಪ್ರತಿಭೆ, ಮಾನಸಿಕ-ದೈಹಿಕ ಸಾಮರ್ಥ್ಯಗಳು ವಿಕಾಸವಾಗುವಂತಹ ಶಿಕ್ಷಣ ಬೇಕು. ಅದಕ್ಕೆ ನಾವೆಲ್ಲರೂ ಶ್ರಮಿಸಬೇಕು. ವಿಶೇಷ ಚೇತನರಿಗಾಗಿ ಉತ್ತಮ ಪರಿಸರ ನಿರ್ಮಾಣ ಅವಶ್ಯ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಪನ್ಮೂಲ ವ್ಯಕ್ತಿ ಎಸ್.ವಿ. ಚಳಗೇರಿ, ಎಲ್ಲ ಮಕ್ಕಳು ತಾರತಮ್ಯವಿಲ್ಲದ ಶಿಕ್ಷಣ ಪಡೆಯಬೇಕು. ವಿಶೇಷ ಚೇತನ ಮಕ್ಕಳಿಗಾಗಿ ಶಾಲೆಯಲ್ಲಿ ಅನೇಕ ಸೌಲಭ್ಯಗಳಿದ್ದು ಅವುಗಳ ಸದ್ವಿನಿಯೋಗ ಮಾಡಿಕೊಳ್ಳಬೇಕು ಎಂದು ವಿಕಲತೆಯ 21 ವರ್ಗೀಕರಣಗಳು ಹಾಗೂ ಅವುಗಳ ಲಕ್ಷಣಗಳನ್ನು ತಿಳಿಸಿದರು.




ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯೆ ಆರ್.ಬಿ. ಸಂಕಣ್ಣವರ ವಹಿಸಿ ಮಾತನಾಡಿ, ವಿಶೇಷ ಚೇತನರು ಶಕ್ತಿ ಶಾಲಿಗಳು. ಅವರಿಗೆ ಪ್ರೋತ್ಸಾಹ ದೊರೆತಲ್ಲಿ ಅವರು ಸಮರ್ಥರಾಗುವರು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವರು ಎಂದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘದ ಗದಗ ಜಿಲ್ಲಾ ಘಟಕಕ್ಕೆ ಜಂಟಿ ಕಾರ್ಯದರ್ಶಿಯಾಗಿ ಆಯ್ಕೆಯಾದ ವಿಶೇಷ ಚೇತನ ಶಿಕ್ಷಕಿ ಆರ್.ಬಿ. ಹಾದಿಮನಿ ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯ ಮೇಲೆ ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಪಿ. ಹಿರೇಮಠ, ಡಿ.ಎಸ್. ಮೀಶೇನವರ, ಎಸ್.ಜಿ. ಗಿರಿತಮ್ಮಣ್ಣವರ, ಐ.ಡಿ. ಕಬ್ಬೇರಹಳ್ಳಿ, ಅಲ್ತಾಫ್ ನದಾಫ್, ಜ್ಯೋತಿ ಅಂಗಡಿ, ನೀಲಮ್ಮ ಹಿರೇಮಠ ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಆರ್.ಡಿ. ಮಗಜಿ ಸ್ವಾಗತಿಸಿದರು, ವ್ಹಿ.ಆರ್. ಹಂಸಿ ನಿರೂಪಿಸಿದರು. ಸಿ.ಎಸ್. ಬೆಳಹಾರ ವಂದಿಸಿದರು. ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳು, ಪಾಲಕರು, ಸಿಬ್ಬಂದಿ ಉಪಸ್ಥಿತರಿದ್ದರು.

ಅತಿಥಿಗಳಾಗಿ ಆಗಮಿಸಿದ್ದ ಮುಖ್ಯೋಪಾಧ್ಯಾಯೆ ಎಸ್.ಆರ್. ಚಾರಹುಸೇನ ಮಾತನಾಡಿ, ವಿಕಲಚೇತನರು ಎಂದಾಕ್ಷಣ ಅಸಮರ್ಥರು ಎಂಬರ್ಥವಲ್ಲ. ಅವರಲ್ಲಿಯೂ ವಿಶೇಷ ಸಾಮರ್ಥ್ಯವಿರುತ್ತದೆ. ಸೋಮಾರಿಗಳಾಗದೇ ನಿರಂತರ ಶ್ರಮ ವಹಿಸುವ ಮೂಲಕ ಸಾಧನೆಯ ಹಾದಿ ಹಿಡಿಯಬೇಕು. ವಿಕಲಾಂಗರಾದ ಅದೆಷ್ಟೋ ಮಂದಿ ಕೆಎಎಸ್/ಐಎಎಸ್ ಸೇರಿದಂತೆ ಕ್ರೀಡಾ ಕ್ಷೇತ್ರದಲ್ಲಿ ಸಾಧಿಸಿ ದೇಶ ಹೆಮ್ಮೆ ಪಡುವಂತಹ ಸಾಧನೆ ಮಾಡಿದ್ದಾರೆ. ಅಂತಹ ಜೀವನಾದರ್ಶಗಳನ್ನು ಸ್ಫೂರ್ತಿಯಾಗಿ ತೆಗೆದುಕೊಂಡರೆ ಜೀವನದಲ್ಲಿ ಸಾಧನೆ ಹಿಂಬಾಲಿಸುತ್ತದೆ ಎಂದರು.




ಲಕ್ಷ್ಮೇಶ್ವರದ ಪಾರ್ವತಿ ಮಕ್ಕಳ ಬಳಗದ ಬಾಲಕಿಯರ ಪ್ರೌಢಶಾಲೆಯಲ್ಲಿ ಸಂತ ಸೇವಾಲಾಲ ಮಹಾರಾಜರ ಜಯಂತಿಯನ್ನು ಆಚರಿಸಲಾಯಿತು. ಮುಖ್ಯ ಶಿಕ್ಷಕ ಜೆ.ಡಿ. ಲಮಾಣಿ ಸೇವಾಲಾಲರ ಬದುಕಿನ ಆದರ್ಶಗಳನ್ನು ಮಕ್ಕಳಿಗೆ ತಿಳಿಸಿದರು. ಶಿಕ್ಷಕರಾದ ಶೀಲಾ ತಳವಾರ, ಪಿ.ಎಲ್. ಪಾಟೀಲ, ಎಸ್.ಎಂ. ಹಾದಿಮನಿ, ಕಾವ್ಯಾ ದೇಸಾಯಿ, ಶ್ವೇತಾ ಅಂಬಲಿ, ಎಂ.ಸಿ. ಹಿರೇಮಠ ಮತ್ತಿತರರಿದ್ದರು.

# ಸಮಾಜಮುಖಿ ಕಾರ್ಯಗಳು ನಿರಂತರವಾಗಿರಲಿ

■ವಿಜಯಸಾಕ್ಷಿ ಸುದ್ದಿ, ರೋಣ

ಸಂಘಟನೆಗಳಿಂದ ಸಮಾಜಮುಖಿ ಕಾರ್ಯಗಳು ನಿರಂತರವಾಗಿ ಸಾಗಬೇಕು. ಅಂದಾಗ ಮಾತ್ರ ದೇವಮಾನವರ ಜನ್ಮ ದಿನಾಚರಣೆಗಳಿಗೆ ನಿಜವಾದ ಅರ್ಥ ಬರುತ್ತದೆ ಎಂದು ಧಾರವಾಡ ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಸಂಜೆ ಪ್ರವಾದಿ ಹಜರತ್ ಮುಹಮ್ಮದ ಪೈಗಂಬರವರ ಜನ್ಮದಿನಾಚರಣೆ ನಿಮಿತ್ತ ಆಝಾದ ಯುವಕ ಸಂಘ ಹಾಗೂ ತಲಾಬಕಟ್ಟಾ ಮಕಾನ ಕಮೀಟಿಯವರ ಆಶ್ರಯದಲ್ಲಿ ಜರುಗುತ್ತಿರುವ ಸರ್ವಧರ್ಮ ಸಾಮೂಹಿಕ ವಿವಾಹ ಹಾಗೂ 25ನೇ ವರ್ಷದ ಬೆಳ್ಳಿ ಮಹೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.




ಇಂದಿನ ದಿನಮಾನಗಳಲ್ಲಿ ಸಂಘಟನೆಗಳು ಜನ್ಮತಾಳಿದ ತಕ್ಷಣ ಮರೆಯಾಗುತ್ತವೆ. ಆದರೆ ರೋಣದ ಆಝಾದ ಸಂಘಟನೆಯವರು ನಿರಂತರವಾಗಿ ಜಾತ್ಯಾತೀತ ಮತ್ತು ಪಕ್ಷಾತೀತವಾಗಿ ಸಮಾಜಮುಖಿ ಕಾರ್ಯಗಳನ್ನು ನಡೆಸಿಕೊಂಡು ಬಂದಿರುವುದು ಸ್ವಾಗತಾರ್ಹವಾಗಿದೆ. ಅಲ್ಲದೆ 25 ವರ್ಷಗಳಿಂದ ಸಂಘಟನೆಯನ್ನು ರೋಣ ಪಟ್ಟಣದ ಸಾರ್ವಜನಿಕರ ಸಹಕಾರ ಪಡೆದುಕೊಂಡು ಬೆಳಸಿರುವುದು ಶ್ಲಾಘನೀಯವಾಗಿದ್ದು, ಇನ್ನೂ ಹೆಚ್ಚಿನ ಒಳ್ಳೆಯ ಕೆಲಸಗಳು ನಡೆಯುವ ಮೂಲಕ ಪಟ್ಟಣದ ಕೀರ್ತಿಯನ್ನು ಹೆಚ್ಚಿಸಲಿ ಎಂದರು.

ಅಧ್ಯಕ್ಷ ಶಫೀಕ ಮೂಗನೂರ ಪ್ರಾಸ್ತವಿಕವಾಗಿ ಮಾತನಾಡಿದರು.

ಸಾನ್ನಿಧ್ಯವನ್ನು ಗುರುಪಾದ ದೇವರು, ನೇತೃತ್ವವನ್ನು ಹಜರತ್ ಸುಲೇಮಾನ ಶಾವಲಿ ಅಜ್ಜನವರು ವಹಿಸಿದ್ದರು. ಪುರಸಭೆ ಅಧ್ಯಕ್ಷೆ ಗೀತಾ ಮಾಡಲಗೇರಿ, ಯೂಸುಫ್ ಇಟಗಿ, ಕೆ.ಬಿ. ಹರ್ಲಾಪೂರ, ಗದಿಗೇಪ್ಪ ಕಿರೇಸೂರ, ಸಂಗಪ್ಪ ಜಿಡ್ಡಿಬಾಗಿಲ, ಮಹಾದೇವಗೌಡ ಲಿಂಗನಗೌಡ್ರ, ಮಲ್ಲಯ್ಯ ಮಹಾಪುರುಷಮಠ, ಭರಮಗೌಡ ಲಿಂಗನಗೌಡ್ರ, ಶಕುಂತಲಾ ಚಿತ್ರಗಾರ, ಚನ್ನಬಸಮ್ಮ ಹಿರೇಮಠ, ರಜಿಯಾಬೇಗಂ ಕೊಟಬಾಗಿ, ಅಪ್ತಾಬ ತಹಸೀಲ್ದಾರ್, ಹನ್ಮಂತಪ್ಪ ತಳ್ಳಿಕೇರಿ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

# ಫೆ.18,19ರಂದು ರೈತರಿಗೆ ತರಬೇತಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿ ಇಲಾಖೆಯ ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಧಾರವಾಡದ ವತಿಯಿಂದ ಅಟಲ್ ಭೂಜಲ ಯೋಜನೆಯಡಿ ಸಮುದಾಯ ಸಹಭಾಗಿತ್ವದೊಂದಿಗೆ ಅಂತರ್ಜಲ ನಿರ್ವಹಣೆ, ಜಲ ಭದ್ರತಾ ಯೋಜನೆ ಸಿದ್ದಪಡಿಸುವುದು, ನೀರಿನ ಬೇಡಿಕೆ ಕಡಿಮೆ ಮಾಡುವ ಸೂಕ್ಷ್ಮ ನೀರಾವರಿ ತಾಂತ್ರಿಕತೆಗಳು ಮತ್ತು ನೀರಿನ ಮರು ಪೂರೈಕೆ ಕ್ರಮಗಳ ಕುರಿತು ದಿ. 18-02-2025 ರಂದು ಗದಗ ಜಿಲ್ಲೆಯ ಗದಗ ತಾಲೂಕಿನ ರೈತರಿಗೆ ಹಾಗೂ 19-02-2025 ರಂದು ರೋಣ ತಾಲೂಕಿನ ರೈತರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಬೆಳಗ್ಗೆ 10:00 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ದಿ. 18.02.2025 ರಂದು ಗದಗ ತಾಲೂಕಿನ ಆಸಕ್ತ 60 ಜನ ರೈತರು ಸದರಿ ತರಬೇತಿಯಲ್ಲಿ ಭಾಗವಹಿಸಲು ವಿ. ವಿ. ಮ್ಯಾಗೇರಿ, ಕೃಷಿ ಅಧಿಕಾರಿಗಳು, ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಗದಗ ಮೊಬೈಲ್ ಸಂಖ್ಯೆ 8277931458 ಗೆ ಹಾಗೂ 19-02-2025 ರಂದು ರೋಣ ತಾಲೂಕಿನ ಆಸಕ್ತ 60 ಜನ ರೈತರು ತರಬೇತಿಯಲ್ಲಿ ಭಾಗವಹಿಸಲು ಗೋಣಿಬಸಪ್ಪ, ಕೃಷಿ ಅಧಿಕಾರಿಗಳು, ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ರೋಣ, ಮೊಬೈಲ್ ಸಂಖ್ಯೆ 9481354843 ಇವರಿಗೆ ಕರೆ ಮಾಡಿ ನೋಂದಾಯಿಸಲು ತಿಳಿಸಲಾಗಿದೆ.

ಮೊದಲು ನೋಂದಾವಣಿ ಮಾಡಿಕೊಂಡ 60 ಜನ ರೈತರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಹಾಗೂ ತರಬೇತಿಗೆ ಹಾಜರಾಗುವ ರೈತ ಬಾಂಧವರು ಕಡ್ಡಾಯವಾಗಿ ತಮ್ಮ ಎಫ್‌ಐಡಿ ಕಾರ್ಡ್ ಅಥವಾ ಚುನಾವಣೆ ಗುರುತಿನ ಚೀಟಿಯನ್ನು ತರಬೇಕು.

ರೈತರು ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ತಾರಾಮಣಿ ಜಿ. ಹೆಚ್ ಹಾಗೂ ಸಹಾಯಕ ಕೃಷಿ ನಿರ್ದೇಶಕಿ ಶ್ರೀಮತಿ ಸುಷ್ಮಾ ಮಳಿಮಠ, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಭಾಲ್ ಹಿಂಸಾಚಾರ | 74 ಶಂಕಿತರ ಫೋಟೋ ಸಾರ್ವಜನಿಕ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಳೆದ ವರ್ಷ ನವೆಂಬರ್‌ನಲ್ಲಿ ಉತ್ತರ ಪ್ರದೇಶದ ಸಂಭಾಲ್‌ನಲ್ಲಿ ಭುಗಿಲೆದ್ದ ಹಿಂಸಾಚಾರದಲ್ಲಿ ಭಾಗಿಯಾಗಿರುವ ಶಂಕಿತ 74 ಜನರ ಫೋಟೋ ಗಳನ್ನು ಹೊಂದಿರುವ ಪೋಸ್ಟರ್‌ಗಳನ್ನು ಶುಕ್ರವಾರ ಹಾಕಲಾಗಿದೆ ಎಂದು ಪಿಟಿಐ ವರದಿ ಮಾಡಿದೆ. ವಿಶ್ವಾಸಾರ್ಹ ಪುರಾವೆಗಳನ್ನು ನೀಡುವ ವ್ಯಕ್ತಿಗಳಿಗೆ ನಗದು ಬಹುಮಾನ ನೀಡಲಾಗುವುದು ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶ್ರೀಶ್ ಚಂದ್ರ ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ.

# 5 ವರ್ಷ ಸಿದ್ದರಾಮಯ್ಯರೇ ಸಿಎಂ ಆಗಲಿ: ಕುಂಭಮೇಳದಲ್ಲಿ ವಿಶೇಷ ಪೂಜೆ!

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಯಾಗ್ ರಾಜ್ ನಲ್ಲಿ 144 ವರ್ಷಗಳ ಬಳಿಕ ನಡೆಯುತ್ತಿರುವ ಮಹಾ ಕುಂಭಮೇಳದಲ್ಲಿ ಕರ್ನಾಟಕ ಸಿಎಂ ಸಿದ್ದರಾಮಯ್ಯ ಅವರ ಅಭಿಮಾನಿ ಓರ್ವ ಭೇಟಿ ಕೊಟ್ಟು ವಿಶೇಷ ಪೂಜೆ ಸಲ್ಲಿಸಿದರು.

ಒಂದೆಡೆ ರಾಜ್ಯ ರಾಜಕೀಯದಲ್ಲಿ ಸಿಎಂ ಬದಲಾವಣೆ ವಿಚಾರ ಸಾಕಷ್ಟು ಸದ್ದು ಮಾಡಿಕೊಳ್ಳುತ್ತಿದ್ದು, ಸ್ವಪಕ್ಷದವರೇ ಮಾತಿನ ಮೂಲಕ ಬಹಿರಂಗವಾಗಿಯೇ ಕಿತ್ತಟಾಕ್ಕೆ ನಿಂತಿದ್ದಾರೆ.



ಈ ಹೊತ್ತಲ್ಲೇ ಗದಗ ತಾಲ್ಲೂಕಿನ ತಿಮ್ಮಾಪೂರ ಗ್ರಾಮದ ಸಿದ್ದರಾಮಯ್ಯ ಅವರ ಅಭಿಮಾನಿಯಾದ ಯುವಕ ಶಿವಕುಮಾರ ರಾಮಪ್ಪ ಯತ್ನಟ್ಟಿ ಅವರು ಕುಂಭಮೇಳಕ್ಕೆ ಭೇಟಿ ಕೊಟ್ಟು, ಐದು ವರ್ಷಗಳ ಅವಧಿಯವರೆಗೆ ಮುಖ್ಯ ಮಂತ್ರಿಗಳಾಗಿ ಸಿದ್ದರಾಮಯ್ಯ ನವರೇ ಮುಂದುವರೆಯಲಿ ಎಂದು ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಅಲ್ಲದೇ ಸಿದ್ದರಾಮಯ್ಯ ನವರ ಭಾವ ಚಿತ್ರವನ್ನು ಹಿಡಿದು ತ್ರಿವೇಣಿ ಸಂಗಮ ನದಿಯಲ್ಲಿ ವಿಶೇಷ ಪೂಜೆ ಸಲ್ಲಿಸಿರುವ ವಿಡಿಯೋ ಇದೀಗ ವೈರಲ್ ಆಗಿದೆ.

ರಾಜ್ಯದಲ್ಲಿ ಸಿಎಂ ಬದಲಾವಣೆ ಕುರಿತು ಪಕ್ಷದಲ್ಲಿ ಗುಸು-ಗುಸು ಶಬ್ದ ಕೇಳಿ ಬರುವ ಹಿನ್ನೆಲೆಯಲ್ಲಿ ಈ ಯುವಕ ಈ ರೀತಿ ಪೂಜೆಯನ್ನು ಸಲ್ಲಿಸಿ ದೇವರಲ್ಲಿ ಮೊರೆ ಹೋಗಿದ್ದಾನೆ. ಸದ್ಯ ಈ ವಿಡಿಯೋ ವೈರಲ್ ಆಗಿದ್ದು, ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡುತ್ತಿದೆ.

# ಪ್ರಯಾಣಿಕರಿಗೆ ಮೂಲಸೌಲಭ್ಯ ಒದಗಿಸುವಂತೆ ಸೂಚನೆ

▶▶ಮೊದಲನೇ ಪುಟದಿಂದ

ಆದಷ್ಟು ಬೇಗ ಮಳಿಗೆಗಳ ಮೇಲೆ ತುಂಬಿರುವ ವೇಸ್ಟೇಜ್‌ಗಳನ್ನು ತೆಗೆಸಬೇಕು. ಅಂಗಡಿಕಾರರು ಕಸವನ್ನು ನಗರಸಭೆ ಕಸ ತುಂಬುವ ವಾಹನದಲ್ಲೇ ಹಾಕಲು ಕ್ರಮ ಕೈಗೊಳ್ಳಬೇಕು. ಬಸ್‌ಗಳಲ್ಲಿ ಹಾಗೂ ಬಸ್ ನಿಲ್ದಾಣದಲ್ಲಿ ಅಂಟಿಸಿರುವ ಅನಧಿಕೃತ ಪೋಸ್ಟರ್‌ಗಳನ್ನು ತೆರವುಗೊಳಿಸಬೇಕು. ಮುಂದಿನ 15 ದಿನದೊಳಗಾಗಿ ಗದಗ ಬಸ್ ನಿಲ್ದಾಣವನ್ನು ಹೊಸ ರೂಪಕ್ಕೆ ತರಬೇಕು ಎಂದು ಸೂಚಿಸಿದರು.

ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾ ಸದಸ್ಯ ಅಶೋಕ ಮಂದಾಲಿ ಮಾತನಾಡಿ, ಗದಗ ಹೊಸ ಬಸ್ ನಿಲ್ದಾಣದ ತುಂಬೆಲ್ಲ ಜೇಡು ಕಟ್ಟಿಕೊಂಡಿದೆ. ಬಸ್ ಚಾಲಕರ, ನಿರ್ವಾಹಕರ ವಿಶ್ರಾಂತಿ ಗ್ರಹಗಳು ಕಸದಿಂದ ತುಂಬಿಕೊಂಡಿವೆ. ಶೌಚಾಲಯಗಳು ಸ್ವಚ್ಛತೆ ಇಲ್ಲದ ಕಾರಣ ಪ್ರಯಾಣಿಕರು ಬಳಸದಂತಾಗಿದೆ. ಪ್ರಯಾಣಿಕರಿಗೆ ಕುಳಿತುಕೊಳ್ಳಲು ಆಸನದ ವ್ಯವಸ್ಥೆ ಇಲ್ಲದ ಕಾರಣ ನಿಂತುಕೊಳ್ಳಬೇಕಾದ ಪರಿಸ್ಥಿತಿಯಿದೆ ಎಂದು ಬೇಸರ ವ್ಯಕ್ತಪಡಿಸಿದರು.

ವಾಯವ್ಯ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗೀಯ ನಿಯಂತ್ರಣಾಧಿಕಾರಿಗಳು ಹಾಗೂ ಬಸ್ ನಿಲ್ದಾಣದ ಉಸ್ತುವಾರಿ ಅಧಿಕಾರಿಗಳು ಕೂಡಲೇ ಬಸ್ ನಿಲ್ದಾಣಕ್ಕೆ ಅಗತ್ಯವಾಗಿ ಬೇಕಾದ ಪರಿಕರಗಳನ್ನು ಪಟ್ಟಿ ಮಾಡಿ ವಾಯವ್ಯ ರಸ್ತೆ ಸಾರಿಗೆ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕರಿಗೆ ಬೇಡಿಕೆ ಸಲ್ಲಿಸಿ. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರೊಂದಿಗೆ ಮಾತನಾಡಿ ಗದಗ ಹೊಸ ಬಸ್ ನಿಲ್ದಾಣಕ್ಕೆ ವಿಶೇಷ ಸೌಲಭ್ಯ ಕಲ್ಪಿಸಲಾಗುವುದು ಎಂದು ಹೇಳಿದರು.

ಗದಗ ಹೊಸ ಬಸ್ ನಿಲ್ದಾಣದ ಆವರಣದಲ್ಲಿನ ಶುದ್ಧ ಕುಡಿಯುವ ನೀರಿನ ಘಟಕ ಬಂದ್ ಇಟ್ಟಿರುವುದನ್ನು ಗಮನಿಸಿ, ಬೇಸಿಗೆ ಕಾಲ ಆರಂಭವಾಗುತ್ತಿರುವುದರಿಂದ ನಿತ್ಯ 24 ಗಂಟೆಗಳ ಕಾಲ ಪ್ರಯಾಣಿಕರಿಗೆ ಶುದ್ಧ ಕುಡಿಯುವ ನೀರು ಪೂರೈಕೆಯಾಗುವಂತೆ ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು.

ವಾಯವ್ಯ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗೀಯ ನಿಯಂತ್ರಣಾಧಿಕಾರಿ ಡಿ. ದೇವರಾಜ್ ಸೇರಿ ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ನೀಲಮ್ಮ ಬೋಳನವರ, ಈಶ್ವರ ಹುಣಶೀಕಟ್ಟಿ, ಸದಸ್ಯರಾದ ಶರೀಫ್ ಬಿಳೆಯಲಿ, ಮುಖಂಡರಾದ ಶಾಂತಣ್ಣ ಮುಳವಾಡ, ಚಾಂದಸಾಬ್ ಕೊಟ್ಟೂರ, ಅನಿಲ ಗರಗ, ಮೋಹನ ದೊಡ್ಡಕುಂಡಿ ಸೇರಿ ಅನೇಕರು ಇದ್ದರು.

### ಅನ್ನದಾನೀಶ್ವರ ಸಭಾಭವನದಲ್ಲಿ ಬೃಹತ್ ರಕ್ತದಾನ ಶಿಬಿರ

# ರಕ್ತದಾನ ಮಾಡಿ ಜೀವ ಉಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ವೈದ್ಯರ ಸಲಹೆಯಂತೆ ಪ್ರತಿ ಮೂರು ತಿಂಗಳಿಗೊಮ್ಮೆ ತಮ್ಮ ರಕ್ತ ದಾನ ಮಾಡುವುದರಿಂದ ಅವಶ್ಯವಿರುವ ರೋಗಿಗಳ ಪ್ರಾಣ ರಕ್ಷಣೆ ಮಾಡಿದಂತಾಗುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆಯ ಅಧಿಕಾರಿ ಡಾ ಎಸ್.ಎಸ್. ನೀಲಗುದ ಸಲಹೆ ನೀಡಿದರು.

ಗ್ರಾಮ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗದಗ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯ, ಪ್ರಾಥಮಿಕ ಆರೋಗ್ಯ ಕೇಂದ್ರ ಲಕ್ಕುಂಡಿ ಹಾಗೂ ಗ್ರಾಮದ ಯುವಕ ಮಂಡಳಗಳ ಸಂಯುಕ್ತ ಆಶ್ರಯದಲ್ಲಿ ಇಲ್ಲಿಯ ಅನ್ನದಾನೀಶ್ವರ ಸಭಾ ಭವನದಲ್ಲಿ ಹಮ್ಮಿಕೊಂಡಿದ್ದ ಬೃಹತ್ ರಕ್ತದಾನ ಶಿಬಿರವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ನಿರಂತರವಾಗಿ ರಕ್ತ ಭಂಡಾರದಲ್ಲಿ ರಕ್ತ ಸಂಗ್ರಹವಿರಬೇಕು. ಅಂದಾಗ ವಿವಿಧ ಅಪಘಾತಗಳಲ್ಲಿ ವ್ಯಕ್ತಿಗಳಲ್ಲಿ ರಕ್ತ ಹರಣ ಹಾಗೂ ಗರ್ಭಧರಿಸಿದ ಮಹಿಳೆಯರಿಗೆ ಹೆರಿಗೆ ಸಮಯದಲ್ಲಿ ರಕ್ತಸ್ರಾವವಾಗಿ ತುರ್ತಾಗಿ ರಕ್ತ ಬೇಕಾದಾಗ ದಾನಿಗಳ ವಿವಿಧ ಗುಂಪಿನ ರಕ್ತವು ಸಹಾಯವಾಗುತ್ತದೆ. ಆದ್ದರಿಂದ ಪ್ರತಿ ಮೂರು ತಿಂಗಳಿಗೊಮ್ಮೆ ರಕ್ತದಾನ ಶಿಬಿರ ನಡೆಸಿದಾಗ ಯುವಕರು ರಕ್ತವನ್ನು ದಾನ ಮಾಡಲು ಮುಂದೆ ಬರಬೇಕು ಎಂದರು.

ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಅಮೃತ ಹರಿದಾಸ ಪ್ರಾಸ್ತಾವಿಕವಾಗಿ ಮಾತನಾಡಿ, ನಿಕ್ಷಯ ಮಿತ್ರದ ಅಡಿಯಲ್ಲಿ ತಮ್ಮ ವೈಯಕ್ತಿವಾಗಿ ಮೂರು ಜನ ಕ್ಷಯ ರೋಗಿಗಳಿಗೆ ಆಹಾರ ಕಿಟ್ ನೀಡಿದರು. 17 ಯುವಕರು ರಕ್ತ ದಾನ ಮಾಡಿದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸದಸ್ಯರಾದ ಕುಬೇರಪ್ಪ ಬೆಂತೂರು, ಪೀರಸಾಬ ನದಾಫ್, ಮಹಾಂತೇಶ ಕಮತರ, ವಿರೂಪಾಕ್ಷಪ್ಪ ಬೆಟಗೇರಿ, ಹನುಂತಪ್ಪ ಬಂಗಾರಿ, ಫಕ್ಕೀರಮ್ಮ ಬೇಲೇರಿ, ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ, ಡಿ.ಟಿ.ಓ ಡಾ. ಆರುಂದತಿ ಕೆ., ಡಾ. ಸುಷ್ಮಿತಾ ಎಸ್., ಡಾ. ಯಲ್ಲಾಲಿಂಗ, ಡಾ. ಲಾವಣ್ಯ, ಪಿ.ಡಿ.ಓ ಅಮೀರನಾಯಕ ಉಪಸ್ಥಿತರಿದ್ದರು.

ಶಿಬಿರವನ್ನು ಉದ್ಘಾಟಿಸಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಗ್ರಾಮ ಪಂಚಾಯಿತಿ ಕರೆಗೆ ಯುವಕರು ರಕ್ತದಾನ ಶಿಬಿರದಲ್ಲಿ ಪಾಲ್ಗೊಂಡು ತಮ್ಮ ರಕ್ತವನ್ನು ದಾನ ಮಾಡಿ ಯಶಸ್ವಿಗೊಳಿಸಿದ್ದಕ್ಕೆ ಅಭಿನಂದನೆ ಸಲ್ಲಿಸಿದರು.


### ಸೋಮೇಶ್ವರನ ಸನ್ನಿಧಿಯಲ್ಲಿ ಬೆಸೆದ ಬಾಳ ಬಂಧ

# ಇಂಗ್ಲೆಂಡ್ ವರ, ಹುಬ್ಬಳ್ಳಿಯ ವಧು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶನಿವಾರ ಇಂಗ್ಲೆಂಡ್ ದೇಶದ ವರ ಮತ್ತು ಹುಬ್ಬಳ್ಳಿಯ ವಧುವಿನ ವಿವಾಹ ಮಹೋತ್ಸವ ಹಿಂದೂ ಸಂಪ್ರದಾಯದಂತೆ ಶಾಸ್ತ್ರೋಕ್ತವಾಗಿ ನೆರವೇರಿತು.

ಎಂಎಸ್‌ಸಿ ಸೈಕಾಲಜಿ ಪದವೀಧರೆಯಾದ ಹುಬ್ಬಳ್ಳಿಯ ರೇಣುಕಾ ಧಾರವಾಡಕರ ಇಂಗ್ಲಂಡ್‌ನಲ್ಲಿ ಉದ್ಯೋಗದಲ್ಲಿದ್ದಾರೆ. ಈ ವೇಳೆ ಇಂಗ್ಲಂಡ್‌ನ ಮ್ಯಾಂಚೆಸ್ಟರ್‌ನ ಯುವಕ ಆರನ್ ಫರ್ನಿ ಅವರ ಪರಿಚಯವಾಗಿ ಎರಡೂ ಕುಟುಂಬದ ಒಪ್ಪಿಗೆ ಪಡೆದು ವಿವಾಹ ಬಂಧನಕ್ಕೊಳಗಾಗಿದ್ದಾರೆ.



ಕುಟುಂಬದ ಮನೆ ದೇವರು/ಆರಾಧ್ಯದೈವ ಲಕ್ಷ್ಮೇಶ್ವರದ ಸೋಮೇಶ್ವರನ ಸನ್ನಿಧಿಯಲ್ಲಿ ತನ್ನ ವಿವಾಹ ನೆರವೇರಬೇಕು ಎಂಬ ಮಗಳ ಇಚ್ಛೆಯಂತೆ ತಂದೆ-ತಾಯಿಗಳು ಎಲ್ಲ ಸಂಬಂಧಿಕರನ್ನು ಆಮಂತ್ರಿಸಿ ಹಿಂದೂ ಸಂಪ್ರದಾಯದಂತೆ ಅತ್ಯಂತ ಶಾಸ್ತ್ರೋಕ್ತವಾಗಿ ಮದುವೆ ಮಾಡಿಸಿದರು.

ದೇವಸ್ಥಾನವನ್ನು ತಳಿರು, ತೋರಣ, ಹೂಮಾಲೆಗಳಿಂದ ಅಲಂಕರಿಸಲಾಗಿತ್ತು. ತೆಂಗಿನ ಮಂಟಪ ಹಾಕಲಾಗಿತ್ತು. ಸೋಮೇಶ್ವರನಿಗೆ ವಿಶೇಷ ಪೂಜೆ, ಅಭಿಷೇಕದೊಂದಿಗೆ ಅಲಂಕಾರಗೊಳಿಸಲಾಗಿತ್ತು.

ಪುರೋಹಿತರು ವರನಿಗೆ ಲಿಂಗಧಾರಣೆ ಮಾಡಿಸಿ ಎಲ್ಲ ಮಂತ್ರೋಪದೇಶಗಳನ್ನು ಕನ್ನಡದಲ್ಲಿಯೇ ಹೇಳಿಸಿದ್ದು ವಿಶೇಷವಾಗಿತ್ತು. ಪಕ್ಕದಲ್ಲಿಯೇ ಇದ್ದ ಸ್ನೇಹಿತರು ವರನಿಗೆ ಇಂಗ್ಲೀಷಿನಲ್ಲಿ ಅದರರ್ಥ ವಿಶ್ಲೇಷಿಸಿದರು. ಮಂಗಳವಾದ್ಯ, ಮಂತ್ರಘೋಷದೊಂದಿಗೆ ಆರತಕ್ಷತೆ ನೆರವೇರಿ ಆಗಮಿಸಿದ್ದ ಇಂಗ್ಲಂಡ್-ಭಾರತದ ಸಂಬಂಧಿಕರು ವಧು-ವರರಿಗೆ ಆಶೀರ್ವದಿಸಿದರು.

ವರ ಆರೆನ್‌ಗೆ ಭಾರತದ ಸಂಸ್ಕೃತಿ, ಸಂಪ್ರದಾಯ, ಆಚರಣೆ ಮತ್ತು ವಿವಾಹ ಪದ್ಧತಿಗಳ ಮೇಲೆ ಅಪಾರ ಪ್ರೀತಿ ಗೌರವವಂತೆ. ಮದುವೆ ಆಗಮಿಸಿದ್ದ ವರನ ತಂದೆ-ತಾಯಿ (ಜಿಲಿಯನ್ ಮತ್ತು ಲಿಯೋನಾರ್ಡ್ ಫರ್ನಿ), ಸಹೋದರಿಯರೂ ಸಹ ಹಣೆಗೆ ಕುಂಕುಮ, ಕೈಗೆ ಮೆಹಂದಿ ಹಚ್ಚಿ ಹಿಂದೂ ಸಂಪ್ರದಾಯದಂತೆ ಧೋತಿ, ಸೀರೆ ಧರಿಸಿ ಗಮನ ಸೆಳೆದಿದ್ದರು.

ಆರೆನ್ ತುಂಬಾ ಒಳ್ಳೆಯ ಹುಡುಗ. ಮಗಳ ಆಸೆ, ದೇವರ ಇಚ್ಛೆಯಂತೆ ಮನೆ ದೇವರು ಸೋಮೇಶ್ವರನ ಸನ್ನಿಧಿಯಲ್ಲಿ ನಮ್ಮ ಸಂಪ್ರದಾಯದಂತೆ ಮದುವೆ ಮಾಡಿಕೊಟ್ಟಿದ್ದೇವೆ ಎಂದರು ತಂದೆ-ತಾಯಿ.

## ಜಲ ಜೀವನ್ ಮಿಷನ್ ಬಗ್ಗೆ ಬಿಜೆಪಿ 'ಸುಳ್ಳು ಹರಡುತ್ತಿದೆ' – ಸಿದ್ದರಾಮಯ್ಯ ಕಿಡಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಜಲ ಜೀವನ್ ಮಿಷನ್ (ಜೆಜೆಎಂ)ಗೆ ಸಂಬಂಧಿಸಿದಂತೆ ಬಿಜೆಪಿ ರಾಜ್ಯಕ್ಕೆ ಘೋಷಿಸಿದ್ದ ಹಣವನ್ನು ಬಿಡುಗಡೆ ಮಾಡದೆ "ಕರ್ನಾಟಕಕ್ಕೆ ದ್ರೋಹ ಮಾಡಿದೆ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಬಿಜೆಪಿಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಕೇಂದ್ರ ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಅವರನ್ನು ಗುರಿಯಾಗಿಸಿಕೊಂಡ ಅವರು, "ಸುಳ್ಳುಗಳನ್ನು ಹರಡುತ್ತಿದ್ದಾರೆ" ಎಂದು ಆರೋಪಿಸಿದ್ದಾರೆ.

ಜಲ ಜೀವನ್ ಮಿಷನ್ ಅಡಿಯಲ್ಲಿ ಕರ್ನಾಟಕಕ್ಕೆ ನೀಡಬೇಕಿದ್ದ 28,623 ಕೋಟಿ ರೂ. ಹಂಚಿಕೆಯಲ್ಲಿ ರಾಜ್ಯವು 11,760 ಕೋಟಿ ರೂ.ಗಳನ್ನು ಖರ್ಚು ಮಾಡಿದೆ ಎಂದು ಸೋಮಣ್ಣ ಲೋಕಸಭೆಗೆ ತಿಳಿಸಿದ್ದಾರೆ ಎಂದು ಮಾಧ್ಯಮ ವರದಿಗಳು ತಿಳಿಸಿವೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ, "ಕೇಂದ್ರ ಸರ್ಕಾರವು ಕರ್ನಾಟಕದಲ್ಲಿ ಜಲ ಜೀವನ್ ಮಿಷನ್ ಅನ್ನು ಉದ್ದೇಶಪೂರ್ವಕವಾಗಿ ಹಾಳುಗೆಡವಿರುವುದನ್ನು ಮುಚ್ಚಿಹಾಕಲು ಕೇಂದ್ರ ಸಚಿವ ಸೋಮಣ್ಣ ಸುಳ್ಳುಗಳನ್ನು ಹರಡುತ್ತಿದ್ದಾರೆ!" ಎಂದು 'ಎಕ್ಸ್' ನಲ್ಲಿ ಪೋಸ್ಟ್ ಮಾಡಿದ್ದಾರೆ. ಜೆಜೆಎಂ (ರಾಜ್ಯದಲ್ಲಿ) ಒಟ್ಟು ಹಂಚಿಕೆ 49,262 ಕೋಟಿ ರೂ.ಗಳಾಗಿದ್ದು, ಇದರಲ್ಲಿ ಕೇಂದ್ರದ ಪಾಲು 26,119 ಕೋಟಿ ರೂ.ಗಳಾಗಿದ್ದು, ರಾಜ್ಯದ ಪಾಲು 23,142 ಕೋಟಿ ರೂ.ಗಳಾಗಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

## ಸೇವಾಲಾಲರು ಮನುಕುಲಕ್ಕೆ ದಾರಿದೀಪ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತೀಯರ ಸಾಮಾಜಿಕ, ಧಾರ್ಮಿಕ, ಆಧ್ಯಾತ್ಮಿಕ ಗುರು ಸಂತ ಸೇವಾಲಾಲ್ ಮಹಾರಾಜರು ಸಮಾಜದ ಜನರಲ್ಲಿನ ಅಜ್ಞಾನ, ಮೂಢನಂಬಿಕೆ, ಕಂದಾಚಾರಗಳನ್ನು ಹೋಗಲಾಡಿಸಿ ಸುಜ್ಞಾನದ ಬೆಳಕು ಮೂಡಿಸಿದ್ದಾರೆ. ಅವರ ತತ್ವಾದರ್ಶ, ಚಿಂತನೆಗಳು ಇಡೀ ಮನುಕುಲಕ್ಕೆ ದಾರಿದೀಪವಾಗಿವೆ ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು.

ಅವರು ಶನಿವಾರ ಪಟ್ಟಣದ ತಹಸೀಲ್ದಾರ ಕಾರ್ಯಾಲಯದಲ್ಲಿ ಸಂತ ಸೇವಾಲಾಲ ಮಹಾರಾಜರ ಜಯಂತ್ಯುತ್ಸವ ಆಚರಿಸಿ ಮಾತನಾಡಿ, ಪ್ರಕೃತಿಯೇ ಧರ್ಮ ಎಂದು ಸಾರಿದ ಸಂತ ಸೇವಾಲಾಲ್ ಮಹಾರಾಜರು ಲಂಬಾಣಿ ಜನರಲ್ಲಿನ ಅಜ್ಞಾನ, ಮೂಢನಂಬಿಕೆಗಳನ್ನು ಹೋಗಲಾಡಿಸಿ ಅವರಲ್ಲಿ ಸುಜ್ಞಾನದ ಬೆಳಕು ಮೂಡಿಸಿದ ಆರಾಧ್ಯ ದೈವವಾಗಿದ್ದಾರೆ. ಅವರು ಲೋಕ ಸಂಚಾರದ ಮೂಲಕ ಜನರ ಕಷ್ಟ ಕಾರ್ಪಣ್ಯಗಳನ್ನು ದೂರಮಾಡಿ ಸಾಮಾಜಿಕ ಚಿಂತನೆಯಲ್ಲಿಯೇ ಬದುಕನ್ನು ಸಮರ್ಪಿಸಿದ್ದು, ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ಎಲ್ಲರೂ ಸಾಗಬೇಕಾಗಿದೆ ಎಂದರು.

ಈ ವೇಳೆ ತಾ.ಪಂ ಇಓ ಧರ್ಮರ ಕೃಷ್ಣಪ್ಪ, ಬಂಜಾರ ಕಲ್ಯಾಣ ಸಂಘದ ತಾಲೂಕಾಧ್ಯಕ್ಷ ದೀಪಕ ಲಮಾಣಿ, ಮುತ್ತಪ್ಪ ಲಮಾಣಿ, ಶೇಖಪ್ಪ ಲಮಾಣಿ, ಸೋಮಪ್ಪ ಲಮಾಣಿ, ಸಮಾಜ ಕಲ್ಯಾಣ ಇಲಾಖೆಯ ಮುತ್ತಣ್ಣ ಸಂಕನೂರ, ಹೆಸ್ಕಾಂನ ಆಂಜನಪ್ಪ ಎ, ಗುರುರಾಜ ಸಿ ಸೇರಿ ಸಮಾಜ ಬಾಂಧವರು, ಕಂದಾಯ, ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ಇದ್ದರು. ಪಟ್ಟಣದ ತಾ.ಪಂ ಕಾರ್ಯಾಲಯ, ಪುರಸಭೆ, ಕೆಇಬಿ, ಡಿಪೋ ಸೇರಿ ಸರ್ಕಾರಿ ಕಚೇರಿ, ಶಾಲಾ-ಕಾಲೇಜುಗಳಲ್ಲಿ ಸೇವಾಲಾಲ್ ಮಹಾರಾಜರ ಜಯಂತಿ ಆಚರಿಸಲಾಯಿತು.

## ಸಬರಮತಿ ಆಶ್ರಮ, ವಿವೇಕ ಪುತ್ಥಳಿ ವೀಕ್ಷಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಾಗಾವಿಯಲ್ಲಿರುವ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಆವರಣದಲ್ಲಿನ ಸಬರಮತಿ ಆಶ್ರಮ ಹಾಗೂ ಸ್ವಾಮಿ ವಿವೇಕಾನಂದ ಪುತ್ಥಳಿಯನ್ನು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಮೊದಲು ವಿವಿ ಆವರಣದ ಸಬರಮತಿ ಆಶ್ರಮಕ್ಕೆ ಭೇಟಿ ನೀಡಿ, ಗುಜರಾತ್ ರಾಜ್ಯದಲ್ಲಿರುವ ಗಾಂಧೀಜಿಯವರ ಸಬರಮತಿ ಆಶ್ರಮದ ಮಾದರಿಯಲ್ಲಿಯೇ ನಿರ್ಮಿಸಿರುವ ಸಬರಮತಿ ಆಶ್ರಮವನ್ನು ಸಂಪೂರ್ಣವಾಗಿ ವೀಕ್ಷಿಸಿ ಮೆಚ್ಚುಗೆಯ ಮಾತುಗಳನ್ನಾಡಿದರು. ಗಾಂಧಿಜಿಯವರ ತತ್ವ-ಸಿದ್ಧಾಂತ, ಆಚಾರ-ವಿಚಾರಗಳನ್ನು ಇಲ್ಲಿ ಆಗಮಿಸುವ ಪ್ರವಾಸಿಗಳಿಗೆ ಉಣಬಡಿಸುವ ಉದ್ದೇಶ ಈ ಆಶ್ರಮದಿಂದ ಆಗಲಿ ಎಂದು ಹೇಳಿದರು.

ನಂತರ ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ ವಿವಿ ಆವರಣದಲ್ಲಿ ನೂತನವಾಗಿ ಲೋಕಾರ್ಪಣೆಯಾದ ಸ್ವಾಮಿ ವಿವೇಕಾನಂದರ ಪುತ್ಥಳಿ ವೀಕ್ಷಿಸಿ ಪ್ರಶಂಸೆ ವ್ಯಕ್ತಪಡಿಸಿದರು. ಸ್ವಾಮಿ ವಿವೇಕಾನಂದರು ಮಹಾನ್ ಮೇಧಾವಿಗಳು. ಅವರ ವಿಚಾರಧಾರೆ, ದೃಢ ನಿರ್ಧಾರಗಳು ಇಂದಿನ ಯುವ ಪೀಳಿಗೆಗೆ ಮಾರ್ಗದರ್ಶನವಾಗಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಕುಲಪತಿ ಪ್ರೊ. ಸುರೇಶ್ ನಾಡಗೌಡರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಲೋಕಾಯುಕ್ತ ಎಸ್.ಪಿ ಹನುಮಂತರಾಯ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಲೋಕಾಯುಕ್ತ ಡಿವೈಎಸ್ಪಿ ವಿಜಯ ಬಿರಾದಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸಂತ ಸೇವಾಲಾಲ್ ಜಯಂತಿ ಆಚರಣೆ

# ಸಂತ ಸೇವಾಲಾಲರು ಶ್ರೇಷ್ಠ ದಾರ್ಶನಿಕರು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶನಿವಾರ ಸಂತ ಸೇವಾಲಾಲ ಅವರ ಜಯಂತಿಯನ್ನು ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಹಾಗೂ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಸಂತ ಸೇವಾಲಾಲ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವುದರ ಮೂಲಕ ಸಂತ ಸೇವಾಲಾಲ್‌ರ ಜಯಂತಿ ಆಚರಿಸಲಾಯಿತು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಭಾರತ ದೇಶದ ನೆಲದಲ್ಲಿ ಹಲವು ಸಂತರು, ಧರ್ಮ ಸುಧಾರಕರು, ತತ್ವಜ್ಞಾನಿಗಳು ಜನ್ಮ ತಾಳಿ ಜನರಲ್ಲಿನ ಅಜ್ಞಾನ ಅಂಧಕಾರವನ್ನು ಹೋಗಲಾಡಿಸಿದ್ದಾರೆ. ಇಂತಹ ಮಹಾನ್ ಸಂತರುಗಳಲ್ಲಿ ಸಂತ ಸೇವಾಲಾಲ್ ಮಹಾರಾಜರು ಒಬ್ಬರಾಗಿದ್ದಾರೆ ಎಂದರು.

ಸಂತ ಸೇವಾಲಾಲರು ಶ್ರೇಷ್ಠ ದಾರ್ಶನಿಕರು. ಶ್ರೇಷ್ಠ ವ್ಯಕ್ತಿತ್ವ ಹೊಂದಿದ್ದ ಸಂತ ಸೇವಾಲಾಲರು ಲೋಕಕಲ್ಯಾಣಕ್ಕಾಗಿ ಶ್ರಮಿಸಿ ತಮ್ಮ ಜೀವನವನ್ನು ಮುಡಿಪಾಗಿಟ್ಟವರು. ಅವರ ತತ್ವ ಮತ್ತು ಆದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕಾದ ಅಗತ್ಯತೆಯಿದೆ ಎಂದು ತಿಳಿಸಿದರು.



ವಕೀಲರು ಹಾಗೂ ಗೋರ ಸೇನಾ ಸಂಘದ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ ಮಾತನಾಡಿ, ಸಂತ ಸೇವಾಲಾಲರು ಸಾಮಾಜಿಕ ಹಾಗೂ ಧಾರ್ಮಿಕ ಸುಧಾರಕರಾಗಿದ್ದಾರೆ. ಮೂಢನಂಬಿಕೆ ವಿರುದ್ಧ ಹೋರಾಡಿದ ವಿವೇಚನಾಶೀಲರೂ ಆಗಿದ್ದ ಇವರು, ಜಗದಂಬಾದೇವಿಯ ಭಕ್ತರಾಗಿದ್ದರು. ಸೇವಾಲಾಲರು ತಮ್ಮ ಲೀಲೆಗಳ ಹಾಗೂ ಪವಾಡಗಳ ಮೂಲಕ ಜನರ ಮನಸ್ಸಿನಲ್ಲಿ ಗುರುವಿನ ಸ್ಥಾನವನ್ನು ಪಡೆದರು ಎಂದು ಹೇಳಿದರು.

ಸಮಾಜದ ಮುಖಂಡರಾದ ಪಾಂಡು ಚವ್ಹಾಣ ಮಾತನಾಡಿ, ಸಂತ ಸೇವಾಲಾಲರು ಶ್ರೇಷ್ಠ ದಾರ್ಶನಿಕರು. ಸರ್ವರನ್ನು ಒಳಗೊಂಡ ಸಮ ಸಮಾಜದ ನಿರ್ಮಾಣ ಹಾಗೂ ಸರ್ವರಲ್ಲೂ ಸೋದರತೆಯ ಭಾವನೆಯನ್ನು ಮೂಡಿಸಲು ಪ್ರೇರೇಪಿಸಿದ ಮಹಾತ್ಮರಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ಮಹೇಶ ಪೋತದಾರ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರವಿ ಗುಂಜೀಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ, ಡಾವ ಕಾರಭಾರಿ, ಐ.ಎಸ್. ಪೂಜಾರ, ಚಂದ್ರು ಚವ್ಹಾಣ, ಪರಮೇಶ ನಾಯ್ಕ, ಭೀಮಸಿಂಗ್ ರಾಠೋಡ, ಟಿ.ಡಿ. ಪೂಜಾರ, ಕುಬೇರಪ್ಪ ಪವಾರ, ಕೆ.ಸಿ. ನಭಾಪುರ, ನೀಲು ರಾಠೋಡ, ಠಾಕೋರ ಜಾಧವ, ಸೋಮು ಲಮಾಣಿ, ಚಂದು ನಾಯ್ಕ, ಕೃಷ್ಣ ಲಮಾಣಿ, ಲೋಕೇಶ ಕಟ್ಟಿಮನಿ, ನೂರಪ್ಪ ನಾಯ್ಕಚಿ, ದಯಾನಂದ, ಧನಸಿಂಗ್ ನಾಯ್ಕ, ಪುಟ್ಟಪ್ಪ ಚನ್ನಳ್ಳಿ, ಧನ್ನುರಾಮ್ ತಂಬೂರಿ, ಪಾಂಡುರಂಗ ನಾಯ್ಕ್, ಟಿ.ಬಿ. ಜಾಧವ, ಅಮಜಪ್ಪ ಲಮಾಣಿ, ಶಿವು ನಾಯ್ಕ, ರಮೇಶ ರಾಠೋಡ, ಚನ್ನಪ್ಪ ಲಮಾಣಿ, ಠಾಕೂರ ಲಮಾಣಿ, ಈಶ್ವರ ನಾಯ್ಕ, ಅನಿಲ ಕಾರಬಾರಿ, ಸುಭಾಸ ಲಮಾಣಿ, ಪರಶುರಾಮ್ ಗುಡಿಮನಿ ಸೇರಿದಂತೆ ಸಮಾಜದ ಮುಖಂಡರು, ಗಣ್ಯರು, ಹಿರಿಯರು, ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

ಸತ್ಯ, ಅಹಿಂಸೆ, ದಯೆ, ಕರುಣೆಗಳನ್ನು ಪಾಲಿಸುವ ಮೂಲಕ ಧರ್ಮಾತೀತರಾಗಿ ಎಂದು ಸಮಾಜಕ್ಕೆ ಸಾರಿದರು. ಮಾನವ ಜನ್ಮ ಪವಿತ್ರವಾದದ್ದು ಇದನ್ನು ಹಾಳು ಮಾಡಿಕೊಳ್ಳಬೇಡಿ, ವ್ಯಸನಗಳಿಂದ ದೂರವಿರಿ. ಅರಿಷಡ್ ವರ್ಗಗಳನ್ನು ಸುಟ್ಟುಹಾಕಿ, ಪ್ರಾಮಾಣಿಕರಾಗಿ ಜೀವಿಸಿ, ಕಷ್ಟದಲ್ಲಿ ಇರುವವರಿಗೆ ಸಹಾಯ ಮಾಡಿರಿ ಎಂದು ತಿಳಿಸಿದ್ದಾರೆ. ಸಂತ ಸೇವಾಲಾಲರು ಶಿಕ್ಷಣದ ಮಹತ್ವವನ್ನು ಸಾರುವ ಮೂಲಕ ಎಲ್ಲರೂ ಶಿಕ್ಷಿತರಾಗಿ ಅಕ್ಷರ ಜ್ಞಾನವನ್ನು ಪಡೆದು ಜಗತ್ತಿಗೆ ದಾರಿದೀಪವಾಗಬೇಕು ಎಂದು ಸಾರಿದ್ದಾರೆ ಎಂದು ರವಿಕಾಂತ ಅಂಗಡಿ ತಿಳಿಸಿದರು.



ಶಿಗ್ಲಿ ಗ್ರಾಮದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ಸೇವಾಲಾಲ್ ಜಯಂತಿ ಆಚರಿಸಲಾಯಿತು. ಮುಖ್ಯ ಶಿಕ್ಷಕ ಎನ್.ವಿ. ಕುಲಕರ್ಣಿ ಅವರು ಸೇವಾಲಾಲ್‌ರಂತಹ ಸಂತ, ಶರಣರ ಅದರ್ಶ, ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು. ಆರ್. ಡಿಕಲಾಯಗಾರ, ಆರ್.ಎಫ್. ಕಪ್ಪತ್ತನವರ, ಎಸ್.ಬಿ. ಅಣ್ಣಿಗೇರಿ, ತಿಪ್ಪಾನಾಯಕ ಎಲ್, ದೀಪಾ ಭಸ್ಮ, ನೇತ್ರಾ ಬದಾಮಿ ಸೇರಿದಂತೆ ಹಲವರಿದ್ದರು.



ಲಕ್ಷ್ಮೇಶ್ವರ ಸಮೀಪದ ಹರದಗಟ್ಟಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಂತ ಶ್ರೀ ಸೇವಾಲಾಲರ ಜಯಂತಿ ವಿಶೇಷವಾಗಿ ಆಚರಿಸಲಾಯಿತು. ಶಿಕ್ಷಕ ಚಂದ್ರು ನೇಕಾರ ಸೇವಾಲಾಲ ಮಹಾರಾಜರ ಜೀವನ ಚರಿತ್ರೆ, ತತ್ವಾದರ್ಶ, ಮೌಲ್ಯಗಳ ಬಗ್ಗೆ ತಿಳಿಸಿದರು. ಗ್ರಾ.ಪಂ ಅಧ್ಯಕ್ಷೆ ಪ್ರೇಮಕ್ಕ ಮಾನಪ್ಪ ಲಮಾಣಿ, ಶಿಕ್ಷಕರು, ಗ್ರಾಮದ ನಾಯಕ ಡಾವೋ ಕಾರಬಾರಿ ಸೇರಿದಂತೆ ಹಿರಿಯರು, ಯುವಕರು, ವಿದ್ಯಾರ್ಥಿಗಳಿದ್ದರು. ಸೇವಾಲಾಲ್ ಮಹಾರಾಜ ಕುರಿತ ಹಾಡುಗಳಿಗೆ ಲಂಬಾಣಿ ಮಹಿಳೆಯರು, ವಿದ್ಯಾರ್ಥಿನಿಯರು ಹೆಜ್ಜೆ ಹಾಕಿದರು.

### ರಾಜ್ಯದ ಗ್ರಾಮ ಆಡಳಿತ ಅಧಿಕಾರಿಗಳನ್ನು ಅಮಾನತುಗೊಳಿಸಿ ಎಫ್‌ಐಆರ್ ದಾಖಲಿಸುವಂತೆ ತಹಸೀಲ್ದಾರರಿಗೆ ಮನವಿ

# ಒತ್ತಾಯಪೂರ್ವಕ ಹಕ್ಕು ಬದಲಾವಣೆ ಕ್ರಮ ಸರಿಯಲ್ಲ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ರಾಜ್ಯಾದ್ಯಂತ ಗ್ರಾಮ ಆಡಳಿತ ಅಧಿಕಾರಿಗಳ ವೃಂದದ ವತಿಯಿಂದ ಇ-ಪೌತಿ ಖಾತಾ ಆಂದೋಲನವನ್ನು ವಿರೋಧಿಸಿದ್ದು, ಹಾಸನ ಜಿಲ್ಲೆಯ ಗ್ರಾಮ ಆಡಳಿತ ಅಧಿಕಾರಿ ಹಾಗೂ ರಾಜ್ಯ ಸಂಘದ ಪ್ರಧಾನ ಕಾರ್ಯದರ್ಶಿ ಶಿವಾನಂದ ನಾಯ್ಕ ಅವರನ್ನು ಅಮಾನತುಗೊಳಿಸಿ ಎಫ್.ಐ.ಆರ್ ದಾಖಲಿಸಿದಂತೆ ರಾಜ್ಯದ 9,839 ಗ್ರಾಮ ಆಡಳಿತ ಅಧಿಕಾರಿಗಳನ್ನು ಕೂಡ ಅಮಾನತುಗೊಳಿಸಿ, ಎಫ್‌ಐಆರ್ ದಾಖಲಿಸುವಂತೆ ಆಗ್ರಹಿಸಿ ಜಿಲ್ಲೆಯ ಗ್ರಾಮ ಆಡಳಿತ ಅಧಿಕಾರಿಗಳು ತಹಸೀಲ್ದಾರ ಮೂಲಕ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಖಾಸಗಿ ಒಡೆತನದ ಕೃಷಿ ಜಮೀನುಗಳ ಹಕ್ಕು ಬದಲಾವಣೆ ವಿಚಾರವು ಖಾತೆದಾರರ ಅಥವಾ ವಾರಸುದಾರರ ವಯಕ್ತಿಕ ವಿಚಾರಗಳಾಗಿದ್ದು, ಸದರಿ ಜಮೀನುಗಳ ಹಕ್ಕು ಬದಲಾವಣೆ ವಿಚಾರವೂ ಉತ್ತರಾಧಿಕಾರಿಗಳ ವಯಕ್ತಿಕ ವಿವೇಚನೆಗೆ ಬಿಟ್ಟ ವಿಚಾರವೇ ಆಗಿದೆ. ಒತ್ತಾಯಪೂರ್ವಕ ಹಕ್ಕು ಬದಲಾವಣೆ ಕ್ರಮ ಸರಿಯಲ್ಲ. ಗ್ರಾಮ ಆಡಳಿತ ಅಧಿಕಾರಿಗಳು ಅಭಿಯಾನದ ಮಾದರಿಯಲ್ಲಿ



ತಾವೇ ಸ್ವತಃ ರೈತರನ್ನು ಸಂಪರ್ಕಿಸಿ ಮರಣ ಪ್ರಮಾಣಪತ್ರ, ವಂಶವೃಕ್ಷ, ಪಹಣಿ, ಮ್ಯುಟೇಷನ್ ಮತ್ತಿತರ ದಾಖಲಾತಿಗಳನ್ನು ಸಂಗ್ರಹಿಸಿ ಹಕ್ಕು ದಾಖಲೆಗೆ ಒತ್ತಡ ಹೇರುವ ಕ್ರಮ ಸರಿಯಲ್ಲ ಎಂದು ತಿಳಿಸಿದರು.

ಜಮೀನಿನ ಮಾಲಿಕರ ಇಚ್ಛೆಯಿಲ್ಲದೇ ಒತ್ತಾಯಪೂರ್ವಕ ಹಕ್ಕು ಬದಲಾವಣೆ ಕ್ರಮವು ಸಮಂಜಸವಲ್ಲ. ಆದ್ದರಿಂದ ತಮ್ಮ ಜಮೀನುಗಳ ಹಕ್ಕುಬದಲಾವಣೆಯ ಆಯ್ಕೆಯನ್ನು ನಿಯಮಾನುಸಾರ ಮೃತ ಖಾತೆದಾರರ ಒಡೆತನದಲ್ಲಿರುವ ಜಮೀನುಗಳ ವಾರಸುದಾರರ ಇಚ್ಛೆಗೆ ಬಿಡುವುದು ಸೂಕ್ತ. ಅಭಿಯಾನ ಮಾದರಿಯಲ್ಲಿ ತರಾತುರಿಯಲ್ಲಿ ಮಾಡಲಾಗುವ ಹಕ್ಕು ಬದಲಾವಣೆ ಪ್ರಕರಣಗಳಲ್ಲಿ ವಾರಸುದಾರರು ಉದ್ದೇಶಪೂರ್ವಕವಾಗಿ ತಪ್ಪು ಮಾಹಿತಿ, ಕಾನೂನುಬದ್ಧ ಕೆಲವು ವಾರಸುದಾರರನ್ನು ಕೈಬಿಡುವುದು ಹಾಗೂ ವಿವಾಹಿತ ಹೆಣ್ಣುಮಕ್ಕಳನ್ನು ಉದ್ದೇಶಪೂರ್ವಕವಾಗಿ ಕೈಬಿಡುವುದು, ಬಹುಪತ್ನಿತ್ವ ಹಕ್ಕಿನ ವಿವಾದಗಳು ಮುಂತಾದ ಕ್ರಮಗಳಿಂದಾಗಿ ತಪ್ಪಾಗಿ ಹಕ್ಕು ದಾಖಲೆಗಳು ದಾಖಲಾಗುವ ಸಂಭವವಿದ್ದು, ಈ ಸಂಬಂಧ ಗ್ರಾಮ ಆಡಳಿತ ಅಧಿಕಾರಿಗಳು ಹಲವು ಬಗೆಯ ಕಾನೂನು ಕ್ರಮಗಳನ್ನು ಎದುರಿಸುವ ಪ್ರಸಂಗಗಳು ಎದುರಾಗುತ್ತವೆ.

ಪೌತಿ ಖಾತಾ ಬದಲಾವಣೆ ಪ್ರಕ್ರಿಯೆಯು ನಿರಂತರವಾಗಿದ್ದು, ಅವೈಜ್ಞಾನಿಕ ಶ್ರೇಯಾಂಕ ವ್ಯವಸ್ಥೆಯನ್ನು ಕೈಬಿಟ್ಟು ಎಂದಿನಂತೆ ನಿಯಮಬದ್ಧವಾಗಿ ಹಾಗೂ ನಿರಂತರವಾಗಿ ಈ ಹಿಂದಿನಿಂದಲೂ ಇರುವಂತೆ ಪೌತಿ ಖಾತೆ ಬದಲಾವಣೆ ವ್ಯವಸ್ಥೆಯನ್ನು ಮುಂದುವರಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಘಟಕದ ಉಪಾಧ್ಯಕ್ಷ ಚಂದ್ರಶೇಖರ ನಾಯಕ, ಮುಂಡರಗಿ ತಾಲೂಕಾಧ್ಯಕ್ಷ ಬಸವರಾಜ ಪೊಲೂರ, ಪ್ರಧಾನ ಕಾರ್ಯದರ್ಶಿ ಎಸ್.ಎಸ್. ಮೇಟಿ ಹಾಗೂ ತಾಲೂಕಿನ ಎಲ್ಲ ಗ್ರಾಮ ಆಡಳಿತ ಅಧಿಕಾರಿಗಳು ಇದ್ದರು.

ಈಗಾಗಲೇ ಮೃತ ಖಾತೆದಾರರ ಹೆಸರಿನಲ್ಲಿರುವ ಪಹಣಿ ದಾಖಲೆಗಳನ್ನು ವಾರಸುದಾರರ ಹೆಸರಿಗೆ ಬದಲಾಯಿಸುವಂತೆ ಅರ್ಜಿ ಸಲ್ಲಿಸಿ ಹಕ್ಕುಬದಲಾವಣೆ ಪಡೆದುಕೊಂಡಿರುವ ಪ್ರಕರಣಗಳಲ್ಲಿಯೇ ಸಾಕಷ್ಟು ಪ್ರಕರಣಗಳಲ್ಲಿ ಸುಳ್ಳು ಮಾಹಿತಿ, ದಾಖಲೆ ನೀಡಿ ಹಕ್ಕುದಾಖಲೆ ಮಾಡಿಕೊಂಡಿರುವ ಸಾವಿರಾರು ಪ್ರಕರಣಗಳಿದ್ದು, ಸದರಿ ಪ್ರಕರಣಗಳಲ್ಲಿ ಗ್ರಾಮ ಆಡಳಿತ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಿ ಅಮಾನತುಗೊಳಿಸಿ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸಿರುವ ನೂರಾರು ಪ್ರಕರಣಗಳಿವೆ ಎಂದು ಮನವಿಯಲ್ಲಿ ತಿಳಿಸಿದರು.

### ಲಾವಣಿ, ಗೀಗಿ ಪದ ಶಿಬಿರದ ಸಮಾರೋಪ-ವಿಚಾರ ಸಂಕಿರಣ ಕಾರ್ಯಕ್ರಮ

# ಸಂಸ್ಕೃತಿ, ಜನಪದ ಕಲೆಗಳು ಅಭಿವೃದ್ಧಿಗೆ ಪೂರಕ

■ವಿಜಯಸಾಕ್ಷಿ ಸುದ್ದಿ, ಗದಗ

ವ್ಯಕ್ತಿ ಪರಿಪೂರ್ಣನಾಗಲು ಜ್ಞಾನ ಹಾಗೂ ಇಚ್ಛಾಶಕ್ತಿ ಅತ್ಯಗತ್ಯವಾಗಿದೆ. ಗ್ರಾಮೀಣ ಕಲೆಗಳನ್ನು ಉಳಿಸಿ ಬೆಳೆಸುವ ಪ್ರಯತ್ನ ನಾವೆಲ್ಲರೂ ಮಾಡಬೇಕಿದೆ ಎಂದು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಡಾ. ಸುರೇಶ್ ವಿ.ನಾಡಗೌಡರ್ ಹೇಳಿದರು.

ನಾಗಾವಿಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಗ್ರಾಮ ಗಂಗೋತ್ರಿ ಆವರಣದ ಕೌಶಲ್ಯ ವಿಕಾಸ ಭವನದಲ್ಲಿ ಶನಿವಾರ ಕರ್ನಾಟಕ ಜಾನಪದ ಅಕಾಡೆಮಿ ಬೆಂಗಳೂರು ಹಾಗೂ ವಿಶ್ವವಿದ್ಯಾಲಯದ




ಸಹಯೋಗದಲ್ಲಿ ಜರುಗಿದ ಲಾವಣಿ ಹಾಗೂ ಗೀಗಿ ಪದ ಶಿಬಿರದ ಸಮಾರೋಪ ಮತ್ತು ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವವಿದ್ಯಾಲಯದ ಉದ್ದೇಶ ಗ್ರಾಮೀಣ ಬೇರು ಜಾಗತಿಕ ಮೇರು ಎಂಬುದಾಗಿದೆ. ಗ್ರಾಮೀಣ ಕಲೆಗಳಾದ ಲಾವಣಿ ಪದ ಗೀಗಿ ಪದ ಜನಪದ ಇವೆಲ್ಲವಗಳನ್ನು ಯುವ ಪೀಳಿಗೆಗೆ ಕಲಿಸಿಕೊಡುವ ಪ್ರಯತ್ನ ಸಾಗಿದ್ದು ಉತ್ತಮವಾಗಿದೆ ಎಂದರು.

ನಮ್ಮ ವ್ಯಕ್ತಿತ್ವದ ಸರ್ವಾಂಗೀಣ ಅಭಿವೃದ್ಧಿಗೆ ಹಾಗೂ ವಿಕಾಸಕ್ಕೆ ನಮ್ಮ ನಾಡಿನ ಸಂಸ್ಕೃತಿ, ಜನಪದ ಕಲೆಗಳು ಪೂರಕವಾಗಿವೆ. ಗ್ರಾಮೀಣ ಕಲೆ-ಸಂಸ್ಕೃತಿ ಕುರಿತಂತೆ ಹಲವಾರು ಕಾರ್ಯಕ್ರಮಗಳನ್ನು ವಿಶ್ವವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದು, ಅಂತಹ ಕಾರ್ಯಕ್ರಮಕ್ಕೆ ವಿಶ್ವವಿದ್ಯಾಲಯ ಸದಾ ಸಹಕಾರ ನೀಡಲಿದೆ ಎಂದು ಹೇಳಿದರು. ವರ್ತಮಾನಕ್ಕೆ ತಕ್ಕಂತೆ ಹೊಂದಿಕೊಳ್ಳುವ ಮೂಲಕ ಗ್ರಾಮೀಣ ಜನಪದ ಗೀಗೀಪದ ಗೀತೆಗಳನ್ನು ಅಳವಡಿಸಿಕೊಳ್ಳಬೇಕು. ಹೊಸ ಪೀಳಿಗೆಗೆ ಈ ಕುರಿತು ಆಸಕ್ತಿ ಮೂಡಬೇಕೆಂದು ತಿಳಿಸಿದರು. ಸಂಸ್ಕೃತಿ ಚಿಂತಕ ಡಾ. ಜಿ.ಬಿ. ಪಾಟೀಲ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ.ಹಿರೇಮಠ ಉಪಸ್ಥಿತರಿದ್ದರು. ಹಿರಿಯ ಕಲಾವಿದರಾದ ಯಲ್ಲವ್ವ ಸಾಲಿಮನಿ, ಲಕ್ಷ್ಮೀಬಾಯಿ ಮಾದರ, ಸಾವಿತ್ರಿಬಾಯಿ ಪೂಜಾರ, ಬಸವರಾಜ್ ಹಡಗಲಿ, ನಿಂಗಪ್ಪ ದಿಂಡೂರ, ವೀರಣ್ಣ ಅಂಗಡಿ ಸೇರಿದಂತೆ ಇತರರನ್ನು ಸನ್ಮಾನಿಸಲಾಯಿತು.

ಜಾನಪದ ಅಕಾಡೆಮಿ ಸಂಚಾಲಕ ಶಂಕ್ರಣ್ಣ ಸಂಕಣ್ಣವರ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಮೌನೇಶ್ ಬಡಿಗೇರ ಅತಿಥಿಗಳನ್ನು ಸ್ವಾಗತಿಸಿದರು. ಸಂಜಯ್ ಕುಮಾರ್ ಹಾರೋಬಿಡಿ ಕಾರ್ಯಕ್ರಮ ನಿರ್ವಹಿಸಿದರು. ಚಂದ್ರಪ್ಪ ಬಾರಂಗಿ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ್ ಮಾತನಾಡಿ, ಓದಿ ಸಾಧನೆ ಮಾಡಿದವರನ್ನು ನೋಡಿದ್ದೇವೆ. ನಾಡಿನಲ್ಲಿ ಸಾಧನೆ ಮಾಡಿದವರು ನಮ್ಮ ಹಿರಿಯರ ಜನಪದರು. ಹಂತಿ ಪದ, ಗೀಗಿ ಪದ, ಜನಪದ ಉಳಿಸಿ ಬೆಳೆಸುವ ಮೂಲಕ ನಮ್ಮ ನಾಡಿನ ಕಲೆ ಪರಂಪರೆಯನ್ನು ಯುವ ಪೀಳಿಗೆಗೆ ಪರಿಚಯಿಸಿ ಪ್ರೋತ್ಸಾಹಿಸಿ ಬೆಳೆಸುವ ಕೆಲಸ ಆಗಲಿ ಎಂದು ಹೇಳಿದರು.

ಬನಹಟ್ಟಿಯ ಜನಪದ ವಿದ್ವಾಂಸರು, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಬಿ.ಆರ್. ಪೊಲೀಸ್‌ಪಾಟೀಲ್ ಲಾವಣಿ ಮತ್ತು ಗಿಗಿ ಪದ ಕಲೆಯ ಪ್ರಸ್ತುತ ಕುರಿತಂತೆ ಮಾತನಾಡುತ್ತಾ, ಜೀವನದ ಜೀವ ಜನಪದವಾಗಿದೆ. ವೃತ್ತಿ ಹೊಟ್ಟೆ ತುಂಬಿಸಿದರೆ, ಜನಪದ ನೆತ್ತಿ ತುಂಬಿಸಿತು ಎಂದು ತಮ್ಮ ಅನುಭವ ಹಂಚಿಕೊಂಡರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka